MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 244 | ಶನಿವಾರ : 12-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 244 | SATURDAY : 12-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಿಎಂ ವಿರುದ್ಧದ ವಿಚಾರಣೆಗೆ ತಡೆ

**ಬೆಂಗಳೂರು, ಜು. 11–**ಬಿಜೆಪಿ ನೇತೃತ್ವದ ಹಿಂದಿನ ರಾಜ್ಯ ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಆರೋಪದಲ್ಲಿ ದಿನ ಪತ್ರಿಕೆಗಳ ಮುಖಪುಟದಲ್ಲಿ ಜಾಹೀರಾತು ನೀಡುವ ಮೂಲಕ ಬಿಜೆಪಿ ವರ್ಚಸ್ಸಿಗೆ ಧಕ್ಕೆ ತಂದ ಆರೋಪದಡಿ ದಾಖಲಿಸಲಾಗಿರುವ ಮಾನಹಾನಿ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ವಿಚಾರಣೆಗೆ ಹೈಕೋರ್ಟ್ ತಡೆ ನೀಡಿದೆ.

ಬಿಜೆಪಿಯ ರಾಜ್ಯ ಘಟಕದ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯ ಬಿ.ಎಸ್.ಕೇಶವ ಪ್ರಸಾದ್ ಎಂಬುವರು ಸಲ್ಲಿಸಿರುವ ಖಾಸಗಿ ದೂರು ರದ್ದು ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯ ಮೂರ್ತಿ ಎಸ್.ಆರ್. ಕೃಷ್ಣ ಕುಮಾರ್ ಅವರಿದ್ದ ನ್ಯಾಯ ಪೀಠ, ಪ್ರಕರಣದ ವಿಚಾರಣೆಗೆ ತಡೆ ನೀಡಿ ಆದೇಶಿಸಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರವಾಗಿ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ವಾದ ಮಂಡಿಸಿ,ಪ್ರಕರಣದಲ್ಲಿ ಇತರೆ ಆರೋಪಿಗಳ ವಿರುದ್ಧ ನ್ಯಾಯಪೀಠ ಈಗಾಗಲೇ ತಡೆ ನೀಡಿದೆ. ಹೀಗಾಗಿ ಅರ್ಜಿದಾರರ ವಿರುದ್ಧದ ವಿಚಾರಣೆಗೂ ತಡೆ ನೀಡಬೇಕು" ಎಂದು ಕೋರಿದರು.

ವಾದ ಆಲಿಸಿದ ನ್ಯಾಯಪೀಠ, ಪ್ರಕರಣದ ವಿಚಾರಣೆಗೆ ತಡೆ ನೀಡಿ ಆದೇಶಿಸಿತು. ಅರ್ಜಿದಾರರ ಪರವಾಗಿ ವಕೀಲ ಸೂರ್ಯ ಮುಖುಂದರಾಜ್ ವಕಾಲತ್ತು ವಹಿಸಿದ್ದರು.

**ಪ್ರಕರಣದ ಹಿನ್ನೆಲೆ:** ಕಳೆದ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ವಿರುದ್ಧ ಭ್ರಷ್ಟಾಚಾರವನ್ನು ಪ್ರಧಾನ ಅಸ್ತ್ರವಾಗಿಸಿದ್ದ ಕಾಂಗ್ರೆಸ್ 2023ರ ಮೇ 5ರಂದು ಎಲ್ಲಾ ಪ್ರಮುಖ ಪತ್ರಿಕೆಗಳ ಮುಖಪುಟದಲ್ಲಿ ಭ್ರಷ್ಟಾಚಾರ ದರ ಪಟ್ಟಿ ಎಂಬ ಹೆಸರಿನ ಅಡಿ ವಿವಿಧ ಹುದ್ದೆಗಳಿಗೆ




ಬಿಜೆಪಿ ಲಂಚ ನಿಗದಿಪಡಿಸಿದೆ ಎಂದು ಆರೋಪಿಸಿ ಜಾಹೀರಾತು ನೀಡಿತ್ತು.ಅಲ್ಲದೇ, ಕೋವಿಡ್ ಸಾಮಗ್ರಿಗಳ ಪೂರೈಕೆ, ಲೋಕೋಪ ಯೋಗಿ ಗುತ್ತಿಗೆಗಳು, ಮಠಗಳಿಗೆ ಅನುದಾನ, ಶಾಲೆಗಳಿಗೆ ಮೊಟ್ಟೆ ಪೂರೈಕೆ, ರಸ್ತೆ ಕಾಮಗಾರಿಗಳಲ್ಲಿ ಶೇ. 25–30% ಕಮಿಷನ್ ಪಡೆಯಲಾಗುತ್ತಿದೆ. ಪತ್ರಿಕೆಗಳಿಗೆ ನೀಡಿದ ಜಾಹೀ ರಾತಿನ ಕೊನೆಯಲ್ಲಿ ಶೇ.40 ಕಮಿಷನ್ (ಬಿಜೆಪಿ) ಸರ್ಕಾರವು ರೂ.1.5 ಲಕ್ಷ ಕೋಟಿಯನ್ನು ಕಳೆದ ನಾಲ್ಕು ವರ್ಷಗಳಲ್ಲಿ ಲೂಟಿ ಮಾಡಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಇದರ ವಿರುದ್ಧ ದೂರು ದಾಖಲಿಸಿದ್ದ ಬಿಜೆಪಿಯು, ಡಬಲ್ ಎಂಜಿನ್ ಸರ್ಕಾರಕ್ಕೆ ಬದಲಾಗಿ ಟ್ರಬಲ್ ಎಂಜಿನ್ ಸರ್ಕಾರ ಎಂದು ಹೇಳುವ ಮೂಲಕ ಬಿಜೆಪಿಯ ವರ್ಚಸ್ಸಿಗೆ ಕಾಂಗ್ರೆಸ್ ಹಾನಿ ಮಾಡಿದೆ. ಚುನಾವಣೆಯಲ್ಲಿ ಗೆಲುವಿಗೆ ಅಡಿಪಡಿಸಲಾಗಿದೆ. ಕೊನೆಯಲ್ಲಿ ಕಾಂಗ್ರೆಸ್‌ಗೆ ಮತ ನೀಡಿ ಎಂದು ಆರೋಪಿಗಳು ಕೇಳಿದ್ದಾರೆ.

## ಪೊಲೀಸ್ ಭದ್ರತೆಯಲ್ಲಿ ಡಬ್ಬಾ ಅಂಗಡಿ, ಮನೆ ತೆರವು

ಯುವ ಮಾರ್ಗ ಸುದ್ದಿ

**ಸಿರವಾರ, ಜು.11–**ಪ್ರತಿಷ್ಠಿತ ಕೇಂದ್ರ ಸರ್ಕಾರ ಮಹತ್ವದ ಭಾರತ್ ಮಾಲ್ ಯೋಜನೆಯ ಬಾಚಿ–ಜಟ್ಟಲ್ಲಾ ಚತುಸ್ಪಥ ರಸ್ತೆಗೆ ಸಿರವಾರ ತಾಲೂಕಿನ ನವಲಕಲ್ ಗ್ರಾಮದಲ್ಲಿ ಅಡ್ಡಿಯಾಗಿದ್ದ ಮನೆ ಹಾಗೂ ಡಬ್ಬಾ ಅಂಗಡಿಗಳ ತೆರವು ಕಾರ್ಯ ಸಿರವಾರ ತಹಸೀಲ್ದಾರ್ ರವಿ ಎಸ್. ಅಂಗಡಿ ಹಾಗೂ ಸಿಪಿಐ ಶಶಿಕಾಂತ ಎಂ ಇವರ ನೇತೃತ್ವದಲ್ಲಿ



ಪೊಲೀಸ್ ಭದ್ರತೆಯಲ್ಲಿ ಗುರುವಾರ ನಡೆಯಿತು.ಮನೆ, ಅಂಗಡಿ ಮಾಲಕರಿಗೆ ತೆರವು ಮಾಡಿಕೊಳ್ಳಲು ಸಾಕಷ್ಟು ಸಮಯಾವಕಾಶ ನೀಡಿದರೂ ಯಾವುದೇ ಪ್ರಯೋಜನೆ ಆಗಲಿಲ್ಲ ಅದಕ್ಕಾಗಿ ಹಿರಿಯ ಅಧಿಕಾರಿಗಳ ಸೂಚನೆಯಂತೆ ಪೊಲೀಸ್ ಭದ್ರತೆಯೊಂದಿಗೆ ತೆರವು ಮಾಡಬೇಕಾಯಿತು ಎಂದು ತಹಸೀಲ್ದಾರ್ ರವಿ ಎಸ್ ಅಂಗಡಿ ತಿಳಿಸಿದರು, ಕಾಮಗಾರಿಯನ್ನು ತ್ವರಿತಗೊಳಿಸಬೇಕಾಗಿದೆ ಈ ಯೋಜನೆಗೆ ಭೂಮಿ ಸ್ವಾಧೀನ ಮಾಡಿಕೊಂಡಿರುವ ರೈತರಿಗೆ ಪರಿಹಾರ ಹಣ ಅವರ ಖಾತೆಗೆ ಜಮೆ ಮಾಡಲಾಗಿದೆ ಅದಾಗ್ಯೂ ಕೆಲ ರೈತರು ಅಡ್ಡಿ ಪಡಿಸಿದ್ದರು ಇಂದು ನವಲಕಲ್, ಪಾತಾಪೂರು, ಹಣಗಿ ಹಾಗೂ ಕವಿತಾಳದಲ್ಲಿ ತೆರವು ಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ಅವರು ಸ್ಥಳದಲ್ಲಿದ್ದ ಮಾಧ್ಯಮದವರಿಗೆ ತಿಳಿಸಿದರು.

## ಆಹಾರ ಪದಾರ್ಥಗಳನ್ನು ಕಲಬೆರಕೆ ಮಾಡಿ ಮಾರಾಟವ ಮೇಲೆ ಕ್ರಮಕ್ಕೆ ಗಂಗಾಧರ ನಾಯಕ ಆಗ್ರಹ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.11–**ಪಟ್ಟಣದ ತಹಸೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಭಾರತೀಯ ಜನತಾ ಪಾರ್ಟಿ ವತಿಯಿಂದ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ರವರಿಗೆ ಮಾಜಿ ಶಾಸಕ ಗಂಗಾಧರ ನಾಯಕ ಮನವಿ ಸಲ್ಲಿಸಿ ಮಾತನಾಡಿ, ಪಟ್ಟಣದಲ್ಲಿನ ಗೌಸಿಯಾಮಸೀದ್ ಹತ್ತಿರದ ಖಾಲಿ ನಿವೇಶನದಲ್ಲಿ ರಫೀ ಎನ್ನುವವರು ತಮ್ಮ ಕಿರಾಣಿ ಅಂಗಡಿಯಲ್ಲಿ ಮಾರಾಟ ಮಾಡುವುದಕ್ಕಾಗಿ ಮಾಸಾಲೆ ಪದಾರ್ಥಗಳು, ಧನಿಯಾ,ಕೊಬ್ಬರಿ, ಸೇರಿದಂತೆ ಪಪಾಯಿ ಬೀಜಗಳನ್ನು ಮೆಣಸನ್ನಾಗಿಸಲು ಹಾನಿಕಾರಿಕ ಕೃತಕ ರಾಸಾಯನಿಕಗಳಿಂದ ಕಲಬೆರಕೆ ಮಾಡುತ್ತಿರುವುದನ್ನು ಅಧಿಕಾರಿಗಳು ಪತ್ತೆ ಮಾಡಿದರು ಕೂಡ ಅರೋಪಿಯ ಮೇಲೆ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಕಲಬೆರಕೆ ಮಾಡುವವರ ಮೇಲೆ ತಾಲೂಕು ಆಡಳಿತ ಕಠಿಣ ಕ್ರಮ ಕೈಗೊಳ್ಳದೆ ಇದಲ್ಲಿ ಜನರ ಆರೋಗ್ಯದ ಮೇಲೆ ಗಂಭಿರವಾದ ಪರಿಣಾಮಭಿರುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಮನವಿ ಸ್ವೀಕರಿಸಿ ತಹಸೀಲ್ದಾರ್ ಭೀಮ ರಾಯ ರಾಮಸಮುದ್ರ ಮಾತನಾಡಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಆಹಾರ ನಿರೀಕ್ಷಕರಾದ ದೇವರಾಜ, ಬಿ.ಜೆ.ಪಿ. ತಾ.ಅಧ್ಯಕ್ಷರಾದ ಜಿ.ಸುಧಾಕರ್ , ರವಿಕುಮಾರ, ಶಿವಕುಮಾರ, ವಿಶ್ವನಾಥ.ಬಿ.ಜಗದೀಶ ಓತೂರ್, ಉಮಾಪತಿ ನಾಯ ಕ,ಕುಮಾರಸ್ವಾಮಿ ಮೇದಾ, ರದ್ರ ಗೌಡ ಮದ್ಲಾಪುರ್, ಶಿವಲಿಂಗಯ್ಯ ಸ್ವಾಮಿ, ಶರ ಣಯ್ಯ ಸ್ವಾಮಿ, ಗೋಪಾಲ ಇಬ್ರಾಂಪುರ್ ಸೇರಿದಂತೆ ಇನ್ನಿತರರು ಇದ್ದರು.

## ಎಸ್‌ಸಿಪಿ, ಟಿಎಸ್‌ಪಿ ಅನುದಾನ ಬಳಸದೇ ನಿರ್ಲಕ್ಷ್ಯ ವಹಿಸಿದಲ್ಲಿ ಕಾನೂನು ಕ್ರಮ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.11–**ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಸಂಖ್ಯೆ ಹೆಚ್ಚಿನ ಮಟ್ಟದಲ್ಲಿದ್ದು, ಈ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ಸದ್ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ 2025ರ ಜೂನ್ ಅಂತ್ಯದವರೆಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೌಲಭ್ಯಗಳನ್ನು ಒದಗಿಸಲು ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಶೀಘ್ರವೇ ಪೂರ್ಣಗೊಳಿಸಿ ಪಟ್ಟಿ ಮಾಡಬೇಕು. ಅರ್ಜಿಗಳನ್ನು ಆಹ್ವಾನಿಸಿದ್ದಲ್ಲಿ ನಿಗದಿತ ಅವಧಿಯೊಳಗೆ ಪ್ರಕ್ರಿಯೆ ಕೈಗೊಂಡು ಪಟ್ಟಿ ಸಿದ್ಧಪಡಿಸಬೇಕು. ಫಲಾ



ನುಭವಿಗಳಿಗೆ ಆದಷ್ಟು ಶೀಘ್ರವೇ ಸೌಲಭ್ಯಗಳು ತಲುಪುವಂತೆ ನೋಡಿಕೊಳ್ಳಬೇಕು ಎಂದರು.

ಪ್ರತಿ ಇಲಾಖೆಗೆ ಪರಿಶಿಷ್ಟರ ಕಾರ್ಯಕ್ರಮಗಳಿಗಾಗಿ ಪ್ರತ್ಯೇಕವಾಗಿ ಹಣ ನಿಗದಿಯಾಗುತ್ತದೆ. ಫಲಾನುಭವಿಗಳ ಗುರಿಯೂ ನಿರ್ಧಾರವಾಗಿರುತ್ತದೆ. ಆದರೂ ವಿಳಂಬವಾಗಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆಸುವುದು ಸರಿಯಲ್ಲ. ಆದಷ್ಟು ಮುಂಚಿತವಾಗಿಯೇ ಗುರಿಗೆ ಅನುಸಾರ ಫಲಾನುಭವಿಗಳ ಪಟ್ಟಿ ಸಿದ್ಧಪಡಿಸಿಕೊಳ್ಳಬೇಕು. ಈ ಕಾರ್ಯದಲ್ಲಿ ವಿಳಂಬ ಮಾಡಬಾರದು ಎಂದರು.

ಶೋಷಿತ ಸಮಾಜದ ಮೇಲೆ ಕಾಳಜಿವಹಿಸಿ ಸರ್ಕಾರವು ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಅನುದಾನ ಮೀಸಲಿಡುತ್ತದೆ. ಇದನ್ನು ಅಧಿಕಾರಿಗಳು ಅರಿಯಬೇಕು. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಜನಾಂಗ ಹೆಚ್ಚಾಗಿದ್ದು, ಅವರಿಗೆ ಈ ಅನುದಾನ ಸಹಾಯಕ್ಕೆ ಬರಬೇಕು. ಎಸಿಪಿ, ಟಿಎಸ್‌ಪಿ ಅನುದಾನವು ಬಳಕೆಯಾಗದೆ ಮರಳಿ ಹೋಗದಂತೆ ಎಚ್ಚರ ವಹಿಸಬೇಕು. ಕಾಮಗಾರಿಗಳನ್ನು ನಿರ್ದಿಷ್ಟ ಸಮಯದಲ್ಲಿ ಮುಗಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ದ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.**(2ನೇಪುಟಕ್ಕೆ)**

## ವಿಶ್ವ ಜನಸಂಖ್ಯಾ ದಿನಾಚರಣೆ: ರಾಯಚೂರಲ್ಲಿ ಜನ ಜಾಗೃತಿ ಜಾಥಾ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.11–**ವಿಶ್ವ ಜನಸಂಖ್ಯಾ ದಿನಾಚರಣೆಯ ಪ್ರಯುಕ್ತ ನಗರದಲ್ಲಿ ಶುಕ್ರವಾರ ಜಾಗೃತಿ ಜಾಥಾಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಚಾಲನೆ ನೀಡಿದರು.

ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು ಎಂಬ ಘೋಷವಾಕ್ಯದೊಡನೆ ಜುಲೈ 10ರ ಶುಕ್ರವಾರ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಟುಂಬ ಕಲ್ಯಾಣ ವಿಭಾಗ ರಾಯಚೂರು, ರಿಮ್ಸ್ ಭೋಧಕ ಆಸ್ಪತ್ರೆ, ಎಸ್.ಕೆ.ಇ. ಪ್ಯಾರಾ ಮೆಡಿಕಲ್ ಕಾಲೇಜ್ ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಬಳಿ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸುಖದಿಂದ




ಸಂಸಾರ ನಡೆಸಲು ಎರಡು ಮಕ್ಕಳು ಸಾಕು. ಇದರಿಂದ ಗುಣಮಟ್ಟದ ಶಿಕ್ಷಣ, ಆರೋಗ್ಯ, ಪೌಷ್ಟಿಕ ಆಹಾರ ಕೊಡಲು ಸಾಧ್ಯವಾಗುತ್ತದೆ. ಜೊತೆಗೆ ದೇಶದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದರು.

ಹೆಚ್ಚುತ್ತಿರುವ ಜನಸಂಖ್ಯೆಯಿಂದ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ, ಅರಿವು ಮೂಡಿಸಲು ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತಿದೆ. ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು ಎಂಬುದು ಈ ಸಲದ ದಿನಾಚರಣೆಯ ಘೋಷಣೆಯಾಗಿದೆ ಎಂದು ಅವರು ತಿಳಿಸಿದರು.

ದೇಶದ ಅಭಿವೃದ್ಧಿಗೆ ಜನ ಬೇಕು. ಆದರೆ, ಮಿತಿಮೀರಿದ ಜನಸಂಖ್ಯೆ ಅಭಿವೃದ್ಧಿಗೆ ಮಾರಕವಾಗುತ್ತದೆ. ಸಮಸ್ಯೆಗಳು ಹೆಚ್ಚುತ್ತಾ ಹೋಗುತ್ತವೆ. ಆದ್ದರಿಂದ ಚಿಕ್ಕ ಸಂಸಾರ ಇದ್ದಷ್ಟು ಉತ್ತಮ ಜೀವನ ನಡೆಸಬಹುದು. ಮದುವೆಯಾಗಲು ಗಂಡಿಗೆ 21 ವರ್ಷ, ಹೆಣ್ಣಿಗೆ 18 ತುಂಬಿರಬೇಕು. ಮಕ್ಕಳ ಜನನದ ಅಂತರ ಕನಿಷ್ಠ 3 ವರ್ಷ ಇರಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಂಖ್ಯಾ ದರವನ್ನು ಹೊಂದಿದ್ದು**(2ನೇಪುಟಕ್ಕೆ)**

## ಕೃಷಿ ಪರಿಕರ ಮಾರಾಟಗಾರರಿಗೆ ತರಬೇತಿ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.11–** ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ಕೃಷಿ ಇಲಾಖೆ ಇವರ ಸಹಭಾಗಿತ್ವದಲ್ಲಿ ಲಿಂಗಸುಗೂರು ಹಾಗೂ ಮಸ್ಕಿ ತಾಲೂಕಿನ ಕೃಷಿ ಪರಿಕರ ಮಾರಾಟಗಾರರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಕೇಂದ್ರದ ಮುಖ್ಯಸ್ಥರಾದ ಡಾ.ವಾಣಿಶ್ರೀ ಎಸ್. ಮಾತನಾಡಿ,ಕೃಷಿ ಪರಿಕರಗಳನ್ನು ರೈತರಿಗೆ ಮಾರಾಟ ಮಾಡುವ ಸಂದರ್ಭದಲ್ಲಿ ಅವುಗಳ ವೈಜ್ಞಾನಿಕ ಮಾಹಿತಿಯನ್ನು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳಿಂದ ಪಡೆದುಕೊಂಡು ಸೂಕ್ತ ಬೆಳೆಗೆ, ಸರಿಯಾದ ಪ್ರಮಾಣ ಮತ್ತು ಬಳಕೆಯ ಕುರಿತು ಮಾಹಿತಿ ನೀಡಿದಲ್ಲಿ ರೈತರಿಗೆ ಬಹಳಷ್ಟು ಅನುಕೂಲವಾಗಲಿದೆ. ರೈತರು ರಾಸಾಯನಿಕಗಳನ್ನು ಸಿಂಪರಣೆ ಸಂದರ್ಭದಲ್ಲಿ ಅವರು ಅನುಸರಿಸಬೇಕಾದ ಸುರಕ್ಷಾ ವಿಧಾನಗಳನ್ನು ತಿಳಿಸುವುದು ಅವಶ್ಯ ಹಾಗೂ ವಿಶ್ವವಿದ್ಯಾಲಯಗಳು ಅಭಿವೃದ್ಧಿಪಡಿಸಿದ ಸುರಕ್ಷಾ ಉಡುಪುಗಳ ಬಗ್ಗೆ ರೈತರಿಗೆ ಮನವರಿಕೆ ಮಾಡಬೇಕು ಎಂದು ಹೇಳಿ ದರು.

ಈ ಕಾರ್ಯಕ್ರಮದಲ್ಲಿ ಕೃಷಿ ಉಪ ನಿರ್ದೇಶಕ ನಹೀಮ್ ಹುಸೇನ್ ಇವರು ಮಾತನಾಡಿ, ಪರಿಕರ ಮಾರಾಟಗಾರರು ಕಾಲಾನುಸಾರ ತಮ್ಮ ಲೈಸೆನ್ಸನ್ನು ನವೀಕರಣಗೊಳಿಸಿಕೊಳ್ಳುವುದು, ರಸಗೊಬ್ಬರ ದಾಸ್ತಾನುಗಳನ್ನು ಪಿಓಎಸ್ ಮೂಲಕ ವಿತರಿಸಲು ಸೂಚಿಸಿದರು.

ಈ ವೇಳೆ ಸಹಾಯಕ ಕೃಷಿ ನಿರ್ದೇಶಕ ಮಲ್ಲಿಕಾರ್ಜುನ ಇವರು ಮಾತನಾಡಿ, ರಸಗೊಬ್ಬರ ಹಾಗೂ ಕೀಟನಾಶಕ ಮಾದರಿಗಳನ್ನು ಪರೀಕ್ಷೆಣೆಗೆ ಒಳಪಡಿಸುವುದು ಸೂಕ್ತ ವಿಧಾನವಾಗಿರುತ್ತದೆ ಹಾಗೂ ಮಾರಾಟ ಮಾಡಿದ ಪರಿಕರಗಳ ದಾಖಾಲಾತಿಗಳನ್ನು ಸೂಕ್ತ ನಮೂನೆಗಳನ್ನು ನಿರ್ವಹಣೆ ಮಾಡಿಟ್ಟುಕೊಳ್ಳಬೇಕು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ವಿಜ್ಞಾನಿಗಳಾದ ರೇಣುಕಾ ಬಿರಾದಾರ ಕೃಷಿ ಅಧಿಕಾ ರಿಗಳಾದ ಅಮರೇಗೌಡ, ಮೇಘಾ, ಶ್ರೀಶೈಲ್, ಮಹಾಂತಯ್ಯ ಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

## ಮೊದಲನೇಯ ಪುಟದಿಂದ

# ಎಸ್‌ಸಿಪಿ, ಟಿಎಸ್‌ಪಿ ಅನುದಾನ ಬಳಸದೇ ನಿರ್ಲಕ್ಷ್ಯ ವಹಿಸಿದಲ್ಲಿ ಕಾನೂನು ಕ್ರಮ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಯುವಜನಾಂಗಕ್ಕೆ ಕ್ರೀಡಾ ಇಲಾಖೆಯಿಂದ ವಾಲಿಬಾಲ್, ಅಥ್ಲೆಟಿಕ್ಸ್ ಸ್ಪರ್ಧೆಗಳನ್ನು ಹಮ್ಮಿಕೊಳ್ಳಬೇಕು. ಸ್ಪರ್ಧೆಯಲ್ಲಿ ವಿಜೇತರಾದ ಅವರಿಗೆ ಉತ್ತಮ ರೀತಿ ತರಬೇತಿ ನೀಡಿ ಅವರಿಗೆ ಪ್ರೋತ್ಸಾಹ ನೀಡಬೇಕು. ಇದಕ್ಕಾಗಿ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಲಾಗುತ್ತದೆ. ಯುವಕರು ಮಾದಕ ವಸ್ತುಗಳ ಸೇವನೆಯಿಂದ ಹೊರಬರಲು ಕ್ರೀಡೆ ಬಗ್ಗೆ ಹೆಚ್ಚಿನ ಆಸಕ್ತಿ ಬರುವಂತೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯದ ರೈತರಿಗೆ ರೇಷ್ಮೆ ಬೆಳೆ ಬಗ್ಗೆ ಹೆಚ್ಚಿನ ಮಾಹಿತಿ ನೀಡಬೇಕು. ಇಲಾಖೆಯಿಂದ ದೊರೆಯುವ ಸೌಲಭ್ಯಗಳು ಕುರಿತು ಅವರಿಗೆ ಮನವರಿಕೆ ಮಾಡಬೇಕು. ರೇಷ್ಮೆ ಬೆಳೆಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸ್ವಸಹಾಯ ಸಂಘಗಳ ಸದಸ್ಯರನ್ನು ಸೇರಿಸಿ ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಯೋಜನೆಗಳ ಸೌಲಭ್ಯ ಬಗ್ಗೆ ತಿಳಿಸಬೇಕು. ಜಿಲ್ಲೆಯಲ್ಲಿ ಮೀನು ಸಾಗಾಣಿಕೆ ಪ್ರಮಾಣವನ್ನು ಹೆಚ್ಚಿಸಲು ಸಂಬಂಧಿಸಿದ ಅಧಿಕಾರಿಗಳು ಟೆಂಡರ್ ಪ್ರಕ್ರಿಯೆ ನಡೆಸಿ ಅಗತ್ಯ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಯುವಜನ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ, ಪಂಚಾಯತ್ ರಾಜ್ ಇಂಜನಿಯರ ವಿಭಾಗದ ಸಹಾಯಕ ಅಭಿಯಂತರರಾದ ಚಂದ್ರಕಲಾ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧಿಕಾರಿ ರಾಜೇಂದ್ರ ಜಲ್ದಾರ್, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರವಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

# ವಿಶ್ವ ಜನಸಂಖ್ಯಾ ದಿನಾಚರಣೆ: ರಾಯಚೂರಲ್ಲಿ ಜನ ಜಾಗೃತಿ ಜಾಥಾ

ಇದನ್ನು ಕಡಿಮೆ ಮಾಡಲು ಜನಸಾಮಾನ್ಯರು ಜಿಲ್ಲಾಡಳಿದೊಂದಿಗೆ ಕೈಜೋಡಿಸಬೇಕು. ಜನನದ ಅಂತರವನ್ನು ಹೆಣ್ಣುಮಕ್ಕಳು ಹಾಗೂ ಪುರುಷರು ಪಾಲಿಸಬೇಕು. ಅದಕ್ಕಾಗಿ ಶಸ್ತ್ರ ಚಿಕಿತ್ಸೆಗಳಿವೆ. ಅವುಗಳನ್ನು ಬಳಸಿಕೊಳ್ಳಬೇಕೆಂದರು.

ನಗರದ ಪ್ರಮುಖ ಬೀದಿಗಳಲ್ಲಿ ಜಾಥ: ವಿಶ್ವ ಜನಸಂಖ್ಯಾ ದಿನಾಚರಣೆಯ ಅಂಗವಾಗಿ ಆಯೋಜಿಸಿರುವ ಜಾಥಾವು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭವಾಗಿ ಭಗತ್‌ಸಿಂಗ್ ವೃತ್ತದ ಮಾರ್ಗವಾಗಿ ತಿನ್‌ಕಂದಿಲ್, ಉಸ್ಮಾನಿಯಾ ತರಕಾರಿ ಮಾರುಕಟ್ಟೆ ಮೂಲಕ ಮಹಾವಿರ ವೃತ್ತದವರೆಗೆ ಸಾಗಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ಶಸ್ತ್ರ ಚಿಕಿತ್ಸೆಕರಾದ ಡಾ.ವಿಜಯಶಂಕರ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಶಿವಕುಮಾರ, ರಿಮ್ಸ್ ಕಾಲೇಜಿನ ಪ್ರಾಂಶುಪಾಲರಾದ ಡಾ. ರಾಹುಲ್ ಕೀರ್ತ, ಜಿಲ್ಲಾ ವಿಬಿಡಿಸಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳಾದ ಡಾ.ಎಂ.ಡಿ.ಶಾಕೀರ್, ಡಾ.ಗಣೇಶ್, ರಾಯಚೂರು ತಾಲೂಕ ಆರೋಗ್ಯಾಧಿಕಾರಿ ಡಾ.ಪ್ರಜ್ವಲ್ ಸೇರಿದಂತೆ ರಿಮ್ಸ್, ಎಸ್.ಕೆ.ಇ. ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತರು ಇದ್ದರು.

# ಟಿ ಸಿ ಸುಟ್ಟರೂ ನಿರ್ಲಕ್ಷಿಸಿದ ಜೆಸ್ಕಾಂ ಅಧಿಕಾರಿಗಳು: ಶರಣಪ್ಪ ಬಿಳಾರ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.11**–ತಾಲೂಕಿನಲ್ಲಿ ಕೃಷಿ ಪಂಪ್‌ಸೆಟ್‌ಗಳ ಟಿಸಿ ಸುಟ್ಟರೂ ರಿಪೇರಿ ಮಾಡಿಕೊಡದೆ ಜೆಸ್ಕಾಂ ನಿರಾಸಕ್ತಿ ವಹಿಸಿದ್ದ ರಿಂದ ರೈತರಿಗೆ ಪ್ರಾಣ ಸಂಕಟ ತಂದೊಡ್ಡಿದೆ. ವಿದ್ಯುತ್ ಪರಿವರ್ತಕಗಳು ಸುಟ್ಟಿರುವ ಪರಿಣಾಮ ಮುಂಗಾರು ಕೃಷಿ ಚಟುವಟಿಕೆಗೆ ತೀವ್ರ ಸಮಸ್ಯೆ ಎದುರಾಗಿದೆ ಎಂದು ಶರಣಪ್ಪ ಬಿಳಾರ ಒತ್ತಾಯಿಸಿದರು



ಬಹುತೇಕ ಹಳ್ಳಿಗಳ ರೈತರು ವಿದ್ಯುತ್ ಪಂಪ್‌ಸೆಟ್ ನಂಬಿ ಒಕ್ಕಲುತನ ಮಾಡುತ್ತಿವೆ. ಗದ್ದೆಗೆ ನೀರು ಬಿಡಲು, ಹತ್ತಿ, ಮೆಣ ಸಿನಕಾಯಿ ಸೇರಿ ನಾನಾ ವಾಣಿಜ್ಯ ಬೆಳೆಗಳಿಗೆ ಪಂಪ್‌ಸೆಟ್ ನೀರು ಬೇಕು. ಆದರೆ, ಹಳೆ ಕಾಲದ ವಿದ್ಯುತ್ ಲೈನ್‌ಗಳು, ಅವೈಜ್ಞಾನಿಕ ಸಂಪರ್ಕ ಗಳು, ಹಣದ ಬೇಡಿಕೆ ರೈತರ ಜೀವ ಹಿಂಡುತ್ತಿವೆ.

ಗಂಗಸ್ಥಳ ಶಾಲೆಯಲ್ಲಿ ಮಕ್ಕಳಿಗೆ ಕುಡಿಯುವ ನೀರಿನ ಸಮಸ್ಯೆ ಬಿಸಿಊಟ ಮಾಡುವವರಿಗೆ &ಗ್ರಾಮಸ್ಥರಿಗೆ ಕುಡಿಯುವ ನೀರಿನ ಸಮಸ್ಯೆಯಾಗಿದೆ

ಒಂದೆರಡು ಗಂಟೆ ಕಡಿತ: ರೈತರ ಪಂಪ್ ಸೆಟ್ ಗಳಿಗೆ ಪ್ರತ್ಯೇಕ ಜಾಲ ಮಾಡಿದ್ದು, ನಿತ್ಯ ಗರಿಷ್ಠ ( ಗಂಟೆ ವಿದ್ಯುತ್ ಪೂರೈಸಲಾಗುತ್ತಿದೆ. ವಿದ್ಯುತ್ ಕಡಿತ, ಗಾಳಿಗೆ ಲೈನ್ ಜಂಪ್, ನಾನಾ ರಿಪೇರಿ ಸೇರಿ ನಾನಾ ಕಾರಣದಿಂದ ಒಂದೆರಡು ಗಂಟೆ ವಿದ್ಯುತ್ ಕಡಿತವಾಗುತ್ತಿದೆ. ಈ ಹಿಂದೆ 5–8 ರೈತರ ಪಂಪ್ ಸೆಟ್ ಗಳಿಗೆ ಒಂದೇ ಟಿಸಿ ಕೂಡಿಸಿ ಸಂಪರ್ಕ ಕಲ್ಪಿಸಲಾಗುತ್ತಿತ್ತು. ನದಿ ದಂಡೆ ಹಾಗೂ ಗಂಗಾಕಲ್ಯಾಣ ಯೋಜನೆಯಡಿ ಬೋವೆಲ್ ಕೊರೆಸಿಕೊಂಡ ರೈತರಿಗೆ ಪ್ರತ್ಯೇಕ ಟಿಸಿ ನೀಡಿದರು ಸಹಿತ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದರು ಈ ಸಂದರ್ಭದಲ್ಲಿ ತಿಮ್ಮಣ್ಣ ಗಂಗಸ್ಥಳ ದುರುಗಪ್ಪ ಗ್ಯಾನಯ್ಯ ಕರೆಪ್ಪ ಇತರರು ಇದ್ದರು

# ವಿಶ್ವ ಜನಸಂಖ್ಯೆ ದಿನಾಚರಣೆ ಚಿಕ್ಕ ಕುಟುಂಬದಿಂದ ಸುಖಿ ಸಂಸಾರ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.11**–ಎರಡು ಬೇಕು ಮೂರು ಸಾಕು ಎಂದು ಚಿಕ್ಕ ಕುಟುಂಬ ಹೊಂದಿದ ದಂಪತಿಗಳು ಸುಖಿ ಸಂಸಾರ ನಡೆಸಲು ಸಾಧ್ಯವೆಂದು ತಜ್ಞ ವೈದ್ಯ ಡಾ.ಖಾಜಾ ಮೋಹಿನುದ್ದೀನ್ ಹೇಳಿದರು.



ಪಟ್ಟಣದ ಸರಕಾರಿ ಆಸ್ಪತ್ರೆಯಲ್ಲಿ ಶುಕ್ರವಾರ ಆಯೋಜಿಸಿದ್ದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಕೌಟುಂಬಿಕ ನೆಮ್ಮದಿ ಕಾರಣ. ಬಾಲ್ಯ ವಿವಾಹ ನಿಷೇದ ಕಾಯ್ದೆ ಮತ್ತು ಬಾಲ್ಯ ವಿವಾಹದಿಂದ ಕಿಶೋರಿಯರ ಆರೋಗ್ಯ ಸಮಸ್ಯೆ ಬಗ್ಗೆ ತಿಳಿ ಹೇಳಿದರು. ಮಕ್ಕಳ ನಡುವಿನ ಅಂತರ ಕಾಯ್ದುಕೊಳ್ಳಲು ಆರೋಗ್ಯ ಇಲಾಖೆಯಲ್ಲಿ ಮಹಿಳೆಯರಿಗೆ ಇರುವ ತಾತ್ಕಾಲಿಕ ವಿಧಾನಗಳಾದ ವಂಕಿ ಅಳವಡಿಸುವುದು, ಅಂತರ ಇಂಜೆಕ್ಷನ್, ಗರ್ಭ ನಿರೋಧಕ ಮಾತ್ರೆಗಳ ಬಳಕೆ, ಶಾಶ್ವತ ವಿಧಾನಗಳಾದ ಟ್ಯುಬೆಕ್ಟಮಿ, ಲೆಪ್ರೆಸ್ಕೋಪಿ ಸೇರಿ ಕುಟುಂಬ ಯೋಜನೆ ಬಗ್ಗೆ ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿತೆ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಆಪ್ತ ಸಮಾಲೋಚಕಿ ರೋಸ್ ಮೇರಿ, ಮೇಲ್ವಿಚಾರಕರಾದ ಪ್ರಾಣೇಶ್, ಹನುಮಂತರಾಯ, ಅಶೋಕ, ನಾಗರತ್ನ, ಶಿವಲೀಲಾ ಮೇಟಿ, ರೇಷ್ಮಾ ಬೇಗಂ, ಪದ್ಮಾವತಿ, ನ್ಯಾನ್ಸಿ, ಅಂಬಮ್ಮ, ಮಂಜುಳಾ, ವಸೀಮ್ ರೆಹಮಾನ್ ಸೇರಿ ಇತರರಿದ್ದರು.

# ಹಾಡುಹಗಲೇ ಚಿನ್ನದಂಗಡಿ ದರೋಡೆ:ಗನ್ ತೋರಿಸಿ 2–3 ಕೆಜಿ ಚಿನ್ನ ದೋಚಿ ಪರಾರಿ

**ಕಲಬುರಗಿ, ಜು.11–** ಚಿನ್ನಾಭರಣ ತಯಾರಿಸುವ ಅಂಗಡಿಗೆ ಗ್ರಾಹಕರಂತೆ ಬಂದು ಗನ್ ತಲವಾರ್ ತೋರಿಸಿ 2 ರಿಂದ 3 ಕೆಜಿ ಚಿನ್ನಾಭರಣ ದೋಚಿದ ಘಟನೆ ಇಂದು ಮಧ್ಯಾಹ್ನ ನಗರದ ಸರಾಫ್ ಬಜಾರ್‌ನಲ್ಲಿ ನಡೆದಿದೆ.

ಚಪ್ಪಲ್ ಬಜಾರ್ ದೇವದಾಸ ಕಾಂಪ್ಲೆಕ್ಸ್ ನಲ್ಲಿರುವ ಮಾಲೀಕ ಜ್ಯುವೆಲೆರ್ಸ ಅಂಗಡಿಯಲ್ಲಿ ದರೋಡೆ ನಡೆದಿದೆ.

ಮಾಸ್ಕ್ ಧರಿಸಿದ ನಾಲ್ವರು ಗ್ರಾಹಕರಂತೆ ಅಂಗಡಿಗೆ ಬಂದು ಕೆಲಸಗಾರರನ್ನು ಬೆದರಿಸಿ,ಕೀಲಿಕೈ ಕಿತ್ತುಕೊಂಡು,



ತಿಜೋರಿಯಲ್ಲಿದ್ದ ಚಿನ್ನ ದೋಚಿ ಪರಾರಿಯಾಗಿದ್ದಾರೆ.

ಈ ಸಮಯದಲ್ಲಿ ಅಂಗಡಿ ಮಾಲೀಕ ಸಬ್ ಕಾ ಮಾಲೀಕ ಹೈ ಎಂಬುವವರು ಸ್ಥಳದಲ್ಲಿ ಇರಲಿಲ್ಲ ಎನ್ನಲಾಗಿದೆ.ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ, ಡಿಸಿಪಿ ಕನ್ನಿಕಾ ಸಿಕ್ರಿವಾಲ್ ಮತ್ತು ಬೆರಳಚ್ಚು ತಜ್ಞರು, ಶ್ವಾನದಳದವರು ಸ್ಥಳಕ್ಕೆ ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ.ತನಿಖೆ ನಂತರ ಹೆಚ್ಚಿನ ಮಾಹಿತಿ ದೊರಕಲಿದೆ

# ಬಳ್ಳಾರಿ ಸೊಸೈಟಿಯ ಸಾಮಾನ್ಯ ಸೌಲಭ್ಯ ಕೇಂದ್ರದಲ್ಲಿ ಇ ಸ್ಟ್ಯಾಂಪ್ ಸೌಲಭ್ಯ

**ಬಳ್ಳಾರಿ, ಜು.11–** ನಗರದ ವಾಲ್ಮೀಕಿ ಸರ್ಕಲ್ ಬಳಿ ಇರುವ ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ಸೊಸೈಟಿ) ಆವರಣದಲ್ಲಿ ಇಂದು ಕೇಂದ್ರ ಪುರಸ್ಕೃತ ಯೋಜನೆ ಸಾಮಾನ್ಯ ಸೇವಾ ಕೇಂದ್ರ ಯೋಜನೆಯಡಿ ಜನತೆಗೆ ವಿವಿಧ ಸೌಲಗಳನ್ನು ಒದಗಿಸುವ ಕೇಂದ್ರ ಆರಂಭಿಸಲಾಗಿದೆ.

ಈಗಾಗಲೇ ರೈತರಿಗೆ ಸಾಲ, ರಸಾಯನಿಕ ಗೊಬ್ಬರ ಮೊದಲಾದವುಗಳನ್ನು ನೀಡುತ್ತಿದ್ದ ಈ ಸೊಸೈಟಿ ರಿಯಾಯಿತಿ ಧರದಲ್ಲಿ ಸೂಪರ್ ಮಾರ್ಕೆಟ್ ಸಹ ಆರಂಭಿಸಿದೆ. ಇದರೊಂದಿಗೆ ಇಂದು ಇ.ಸ್ಟ್ಯಾಂಪ್ ಜೆರಾಕ್ಸ್, ಡಿ.ಟಿ.ಪಿ ವರ್ಕ್ಸ್, ಪಹಣಿ, ಆಧಾರ್ ಕಾರ್ಡ್ ತಿದ್ದುಪಡಿ, ನೋಂದಣೆ , ರೈಲ್ವೇ ಟಿಕೆಟ್ , ಪಾನ್ ಕಸರ್ಡ್, ಪಾಸ್ ಪೋಟೋ ಸೇರಿದಂತೆ ಇತರೆ ಸೌಲಭ್ಯಗಳನ್ನು ಒಂದೇ ಸೂರಿನಡಿ ದೊರೆಯುತ್ತವೆ. ಇದನ್ನು ನಮ್ಮ ಸೊಸೈಟಿ ಗ್ರಾಹಕರು ಹಾಗೂ ರೈತರು, ಸಾರ್ವಜನಿಕರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕೆಂದು ಸೊಸೈಟಿ ಅಧ್ಯಕ್ಷ ಬಿ.ಶ್ರೀನಿವಾಸರೆಡ್ಡಿ ಮನವಿ ಮಾಡಿದರು.

ಈ ವೇಳೆ ಬಿಡಿಸಿಸಿ ಬ್ಯಾಂಕ್ ನ ಬಿ ನವೀನ್ ಕುಮಾರ್




ರೆಡ್ಡಿ, ಸಹಕಾರ ಸಂಘಗಳ ಉಪ ನಿಬಂಧಕ ಗ್ಯಾನಪ್ಪ, ಉಪಾಧ್ಯಕ್ಷೆ ಶಿಲ್ಪ ವಿ, ನಿರ್ದೇಶಕರಾದ ಬಿ.ಕೆ.ಕೆರೆಕೋಡಪ್ಪ, ಎಸ್. ದೊಡ್ಡನಗೌಡ, ಜೆ. ಪೊಂಪಾಪತಿ, ಕೆ. ಪಕ್ಕಿರಪ್ಪ ಆಂಜನೇಯ, ಕೆ.ಜೆ.ಕಲ್ಪನ, ಬಿ. ಚಂದ್ರಿಕಾ, ಕೆ.ಹಂಪಾವತಿ, ಕೆ. ಶ್ರೀಕಳ, ಶಾರದಮ್ಮ, ಬಿ. ಚಂದ್ರಶೇಖರ, ನಾಮ ನಿರ್ದೇಶಕ, ಜೆ. ರವೀಂದ್ರ ಕುಮಾರ್, ಸಿಬ್ಬಂದಿ ವರ್ಗದವರು ಹಾಗೂ ಕ್ಷೇತ್ರಾಧಿಕಾರಿಗಳು ಭಾಗವಹಿಸಿದ್ದರು.

# ಶ್ರೀ ನಂದ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಗುರು ಪೂರ್ಣಿಮೆ ಆಚರಣೆ

**ಬಳ್ಳಾರಿ .ಜು.11–**ನಗರದ ಶ್ರೀ ನಂದ ಸಂಯುಕ್ತ ಪದವಿ ಪೂರ್ವ ಕಾಲೇಜ್ ನಲ್ಲಿ ಗುರು ಪೂರ್ಣಿಮೆಯನ್ನು ಆಚರಿಸಲಾಯಿತು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕರ್ನಾಟಕ ಇವರ ಜೊತೆಯಲ್ಲಿ ಶಾಲಾ ಕಾಲೇಜಿನ ಅಧ್ಯಕ್ಷರಾದ ವಿ. ಗಾಂಧಿ ಕಾರ್ಯಾಕ್ರಮವನ್ನು ಉದ್ಘಾಟಿಸಿ, ಅಸಾಧ್ಯವಾದದ್ದನ್ನು ಸಾಧಿಸುವ ಶಕ್ತಿ ಗುರುವಿಗೆ ಮಾತ್ರ ಇದೆ. ಏಳು ದ್ವೀಪಗಳು ಮತ್ತು ಒಂಬತ್ತು ಖಂಡಗಳಲ್ಲಿ ಗುರುವಿಗಿಂತ ದೊಡ್ಡವರು ಯಾರೂ ಇಲ್ಲ ಗುರುಗಳನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಮುರಳಿಕೃಷ್ಣ, ಹರಿಕುಮಾರ್ ಕೆ. ಎಚ್, ಶ್ರೀ ಮತಿ ಸತ್ಯವಾಣಿ , ಶ್ರೀನಾಥ್ ಜೋಷಿ, . ರಮೇಶ್.ಪಿ. ರಾಘವೇಂದ್ರ ಯಾದವ, ಶ್ರೀಮತಿ. ಚಂದ್ರಿಕ ಚಂದ್ರಕಾಂತ್, ಅ.ಭಾ.ಸಾ.ಪ ಪದಾಧಿಕಾರಿಗಳು ಶ್ರೀ ಮತಿ ಪುಷ್ಪ ಚಂದ್ರಶೇಖರ, ಕಿಶೋರ್ ಅಂಗಡಿ, ಮಲ್ಲಿಕಾರ್ಜನ,




ಶ್ರೀಸುಬ್ಬಾರೆಡ್ಡಿ, ಶ್ರೀಮತಿ ಸರಿತಾ, . ಕೆ .ಲಕ್ಷ್ಮೀಕಾಂತ್ ವಿನಯ್‌ಚೌದರಿ ಶ್ರೀಮತಿ ರಾಜೇಶ್ವರಿ ಕಾರ್ಯಕ್ರಮದಲ್ಲಿ ಭಾಗ ವಹಿಸಿದ್ದರು.

ಭಾಗವಹಿಸಿದ ಎಲ್ಲಾ ಗುರುಗಳಿಗೆ ಸನ್ಮಾನಿಸಲಾಯಿತು. ನಿರೂಪಣೆಯನ್ನು ಪಿ.ಯು.ಸಿ ವಿದ್ಯಾರ್ಥಿನಿಯರು ನಡೆಸಿಕೊಟ್ಟರು. ಶ್ರೀಮತಿ ಅನ್ನಿರಂಜು ಅಬ್ರಹಾಂ ವಂದಿಸಿದರು

# ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರತಿಭಟನೆ

**ಕಲಬುರಗಿ,ಜು.11–**ನಗರದ ತಾಲೂಕ ಪಂಚಾಯತ ಕಾರ್ಯಾಲಯ ಕಚೇರಿಯ ಆವರಣದಲ್ಲಿ, ಕರ್ನಾಟಕ ರಾಜ್ಯ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘ, ಕಲಬುರಗಿ ತಾಲೂಕ ಘಟಕದ ವತಿಯಿಂದ, ನರೇಗಾ ನೌಕರರ ವೇತನ ವಿಳಂಬ, ಆರೋಗ್ಯ ವಿಮೆ ಹಾಗೂ ಸೇವಾ ಭದ್ರತೆ ಸೇರಿ ನ್ಯಾಯಯುತ ವಿವಿಧ ಬೇಡಿಕೆಗಳಿಗೆ ಸರ್ಕಾರದ ಗಮನ ಸೆಳೆಯಲು ಅಸಹಕಾರ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಯಿತು.ಬಾಕಿ




6 ತಿಂಗಳ ವೇತನ ಪಾವತಿ,ನರೇಗಾ ಎಲ್ಲಾ ನೌಕರರಿಗೆ ಸೇವಾ ಭದ್ರತೆ ಒದಗಿಸುವದು.ಎಲ್ಲಾ ನೌಕರರಿಗೂ ಆರೋಗ್ಯ ವಿಮೆ ತ್ವರಿತವಾಗಿ ಅನುಷ್ಠಾನಿಸುವದಕ್ಕಾಗಿ ಮನವಿ ಸಲ್ಲಿಸಲಾಯಿತು.

ಕಲಬುರಗಿ ಜಿಲ್ಲೆಯ ರಾಜ್ಯ ಪ್ರತಿನಿಧಿ ರಾಜು ವಂಟಿ, ಜಿಲ್ಲಾಧ್ಯಕ್ಷ ರವಿಶಂಕರ್ ಲಾವಟೆ, ಜಿಲ್ಲೆಯ ಕಾರ್ಯದರ್ಶಿ ಸಿದ್ರಾಮ್ ಕೆರೂರ್,ಸಂಘದ ತಾಲೂಕ ಅಧ್ಯಕ್ಷ ಮೊಸಿನ್ ಖಾನ್,ಸತೀಶ್ ನೀಲೂರ, ಲಕ್ಷ್ಮಿಕಾಂತ, ಜಗದೀಶ ಮೇಗಪ್ಪಿ, ಸದ್ದಾಮ್ ಹುಸೇನ್, ಎಂ.ಡಿ.ಗೌಸ್ ಮತ್ತು ಸರ್ವ ಸದಸ್ಯರು, ಕ್ಷೇತ್ರ ಸಹಾಯಕರು ಮತ್ತು ಗ್ರಾಮ ಕಾಯಕ ಮಿತ್ರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಯುವ ಮಾರ್ಗ



# ನಾನು ಗಾಬರಿಯಾಗಿಲ್ಲ: ಡಿಕೆಶಿ



**ಬೆಂಗಳೂರು,ಜು.11:**ನಾಯಕತ್ವ ಬದಲಾವಣೆ ಮುಂದೆ ಯಾರು ಮುಖ್ಯಮಂತ್ರಿಯಾಗಿ ಇರುತ್ತಾರೆ, ನಾಯಕತ್ವ ಬದಲಾವಣೆ ಯಾಗುತ್ತದೆಯೇ ಇಲ್ಲವೇ ಎಂಬ ಪ್ರಶ್ನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮ ಯ್ಯ ಅವರೇ ಉತ್ತರ ನೀಡಿದ್ದಾರೆ. ಹಾಗಾಗಿ ಈ ಬಗ್ಗೆ ನಾನು ಮಾತನಾ ಡುವುದು ಸೂಕ್ತವೂ ಅಲ್ಲ ಅವಶ್ಯಕತೆಯೂ ಇಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

ದೆಹಲಿಯಿಂದ ವಾಪಸ್ಸಾದ ಬಳಿಕ ದೇವನಹಳ್ಳಿಯ ಅಂತಾ ರಾಷ್ಟ್ರೀಯ ವಿಮಾನನಿಲ್ದಾಣದಲ್ಲಿ ಸುದ್ದಿಗಾರರೊ ಂದಿಗೆ ಮಾತನಾಡಿದ ಅವರು, ಎಲ್ಲ ವಿಚಾರಗಳ ಬಗ್ಗೆ ಮುಖ್ಯಮಂತ್ರಿಗಳೇ ಮಾತನಾಡಿದ್ದಾರೆ. ಹಾಗಾಗಿ ಈ ಬಗ್ಗೆ ನಾ ನು ಹೆಚ್ಚು ಮಾತನಾಡಲು ಬಯಸಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 5 ವರ್ಷ ನಾನೇ ಸಿಎಂ, ಅಧಿಕಾರ ಹಂಚಿಕೆ, ಒಪ್ಪಂದ ಆಗಿಲ್ಲ ಎಂದೆಲ್ಲಾ ಹೇಳಿದ್ದಾರಲ್ಲ ಈಗಲೂ ನೀವು ನನಗೆ ಬೇರೆ ಆಯ್ಕೆಯೇ ಇಲ್ಲ ಎಂಬ ಹೇಳಿಕೆಗೆ ಬದ್ಧವೇ ಎಂಬ ಪ್ರಶ್ನೆಗೆ ಉತ್ತರಿಸಿದ ಡಿ.ಕೆ ಶಿವಕುಮಾರ್ ನಮ್ಮ ವಿಚಾರ ನಿಮಗೇಕೆ ಬಿಡಿ, ನಿಮ್ಮಲ್ಲೂ ಕೆಲವರಿಗೆ ಏನೇನೋ ಆಸೆಗಳಿರುತ್ತವೆ. ಹೈಕಮಾಂಡ್ ಜತೆ ಮಾತನಾಡಿರುವವರೇ ಎಲ್ಲದ್ದಕ್ಕೂ ಉತ್ತರ ನೀಡಿದ್ದಾರೆ. ಪ್ರಶ್ನೆಗಳನ್ನೂ ಹಾಕಿದ್ದಾರೆ. ನಾನಂತೂ ಈ ಬಗ್ಗೆ ಪ್ರತಿಕ್ರಿಯಿಸಲ್ಲ ಎಂದು ಮಾರ್ಮಿಕವಾಗಿ ಹೇಳಿದರು.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂಬ ಕೂಗಿದೆಯಲ್ಲ ಎಂಬ ಪ್ರಶ್ನೆಗೆ ನೀವೇಕೆ ಗಾಬರಿಯಾಗುತ್ತೀರಿ.ನಾನಂತೂ ಗಾಬರಿಯಾಗಿಲ್ಲ ಗೊಂದಲದಲ್ಲೂ ಇಲ್ಲ ಎಂದು ಡಿಕೆ ಶಿವಕುಮಾರ್ ಹೇಳಿ ಮುಖ್ಯಮಂತ್ರಿಗಳ ಹೇಳಿಕೆಗಳಿಗೆ ಸ್ಪಷ್ಟ ಉತ್ತರ ಕೊಡದೆ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಮಾತನಾಡಿದರು.

ಪಕ್ಷದ ಹೈಕಮಾಂಡ್ ಜತೆ ನಾನು ರಾಜಕೀಯ ವಿಚಾರ ಚರ್ಚೆ ಮಾಡಿಲ್ಲ. ಪಕ್ಷದ ಕಾರ್ಯಕರ್ತರಿಗೆ ಸ್ಥಾನಮಾನ ನೀಡಬೇಕಿದೆ.ಈ ಬಗ್ಗೆ ನಾನುಮತ್ತು ಮುಖ್ಯಮಂತ್ರಿ ಇಬ್ಬರೂ ವರಿಷ್ಠರ ಜತೆ ಚರ್ಚೆ ಮಾಡಿ ತಮ್ಮ ನಿಗಮ ಮಂಡಳಿಗಳಲ್ಲಿ ಪಕ್ಷಕ್ಕಾಗಿ ದುಡಿದಿರುವ ಕಾರ್ಯಕರ್ತರಿಗೆ ಸ್ಥಾನ ನೀಡುವ ಬಗ್ಗೆ ಚರ್ಚಿಸಿದ್ದೇವೆ ಸದ್ಯದಲ್ಲೇ ಹೈಕಮಾಂಡ್‌ಗೆ ಪಟ್ಟಿ ಕಳುಹಿಸಿ ಎಲ್ಲವನ್ನೂ ಅಂತಿಮಗೊಳಿಸುತ್ತೇವೆ ಎಂದರು. ರಾಜ್ಯದ ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಿಸಿದಂತೆ ದೆಹಲಿಯಲ್ಲಿ ಕೇಂದ್ರದ ಅರಣ್ಯ ಸಚಿವರು, ಜಲಶಕ್ತಿ ಸಚಿವರನ್ನು ಭೇಟಿ ಮಾಡಿದ್ದ ವಿವರವನ್ನು ಅವರು ನೀಡಿದರು.

# ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಬೀಳ್ಕೊಡುಗೆ




**ಕಲಬುರಗಿ: ಜು.11:** ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಹಲವಾರು ಕಾರ್ಯಗಳಿಗೆ ಸಹಕಾರ ನೀಡಿದ ಜಿಲಾ ್ಧಿಕಾರಿಗಳು ಮತ್ತು ಪ್ರತಿಯೊಂದು ಇಲಾ ಖೆ ಅಧಿಕಾರಿಗಳು ಪರಸ್ಪರ ಸಹಕಾರ ನೀಡಿದ್ದಾರೆ ಎಂದು ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರಾದೇಶಿಕ ಆಯುಕ್ತರ ವತಿಯಿಂದ ಹಾಗೂ ಜಿಲ್ಲಾಡಳಿತ ವತಿಯಿಂದ ಪ್ರಾದೇ ಶಿಕ ಆಯುಕ್ತರಾಗಿ ಕಾರ್ಯ ನಿರ್ವ ಹಿಸಿದ್ದ ಅವರಿಗೆ ಬೀಳ್ಕೊಡುಗೆ ಮತ್ತು ಅಭಿನಂ ದನಾ ಹಾಗೂ ಜಿಲ್ಲೆಗೆ ಪ್ರಾದೇಶಿಕ ಆಯು ಕ್ತರಾಗಿ ಆಗಮಿಸಿದ ಜಹೀರಾ ನಸೀಮ ಅವರಿಗೆ ಆತ್ಮೀಯ ಸ್ವಾಗತ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಭಾಗದಲ್ಲಿ ನಾನು ಎರಡು ವರ್ಷ 10 ತಿಂಗಳ ಕಾಲ ಕಾರ್ಯನಿರ್ವ ಹಿಸಿದ್ದೇನೆ ಎಂದು ಪ್ರತಿಯೊಬ್ಬರು ನೀಡಿದ ಸಹಕಾರ ನನಗೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಪೇರಣೆಯಾ ಯಿತು. ಕೆಲಸ ನಿರ್ವಹಿಸದ್ದ ಸಮಯದಲ್ಲಿ ಈ ಭಾಗದ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸಿ ಅದಕ್ಕೆ ಪರಿಹಾರಗಳನ್ನು ನೀಡಿ ಪ್ರಮಾಣಿಕತೆಯಿಂದ ಸರಕಾರದ ಸೇವೆ ಯನ್ನು ಸಲ್ಲಿಸಿದ್ದೇನೆ ಕಲಬುರಗಿಯಲ್ಲಿ ನಡೆದ ಸಂಪುಟ ಸಭೆ ಮತ ಏಣಿಕೆ ಕಾರ್ಯ ಸರ್ಕಾರದ ಪ್ರತಿಯೊಂದು ಕಾರ್ಯಕ್ರಮಗಳನ್ನು ತಮ್ಮೆಲ್ಲರ ಸಹಕಾರದಿಂದ ಯಶಸ್ವಿಯಾಗಿ ನಿರ್ವಹಿಸಿದ್ದೇನೆ ಎಂದು ತಿಳಿಸಿದರು.

ಕಲಬುರಗಿ ಪ್ರಾದೇಶಿಕ ಅಯುಕ್ತರಾಗಿ ವರ್ಗಾವಣೆಗೊಂಡ ಜಹೀರಾ ನಸೀಮ್ ಅವರು ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳ ಆಗಬೇಕಾದರೆ ತಮ್ಮೆಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ ಮಾತನಾಡಿ, ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿಗೆ ಯಾವುದೇ ರೀತಿಯ ಪ್ರಚಾರವಿಲ್ಲದೇ ದಕ್ಷತೆ ಪ್ರಮಾಣಿಕತೆಯಿಂದ ತಮ್ಮ ಕಾರ್ಯನಿರ್ವಹಿಸಿದ್ದಾರೆ. ಎಂದು ಅವರು ಹೇಳಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಳಿನ್ ಆತುಲ್,ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಜೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕ ರವೀಂದ್ರ ಕರಲಿಂಗಣ್ಣವರ್, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಅಧ್ಯಕ್ಷ ಲಕ್ಷ್ಮಣ ದಸ್ತಿ ಮಾತನಾಡಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸ್ವಾಗತಿಸಿದರು. ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲೆಯ ಜಿಲ್ಲಾಮಟ್ಟದ ಅಧಿಕಾರಿಗಳು, ತಹಶೀಲ್ದಾರರು, ಪ್ರಾದೇಶಿಕ ಕಚೇರಿ ಅಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಿಎಂ-ಡಿಸಿಎಂ ಕುರ್ಚಿ ಕಿತ್ತಾಟದಲ್ಲಿ ಬಡವಾದ ಕಾರ್ಯಕರ್ತರು



**ಬೆಂಗಳೂರು,ಜು.11–** ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಡುವಿನ ಜಿದ್ದಾಜಿದ್ದಿನ ಪೈಪೋಟಿಯಿಂದಾಗಿ ಕಾಂಗ್ರೆಸ್ ಸರ್ಕಾರ ಆಡಳಿತದಲ್ಲಿದ್ದರೂ ನಿಗದಿತ ಅವಧಿಗೆ ನೇಮಕಾತಿಯಾಗದೆ ಕಾರ್ಯಕರ್ತರು ಹಾಗೂ ಮುಖಂಡರು ಅಧಿಕಾರ ವಂಚಿತರಾಗುತ್ತಿರುವ ಅಸಮಾಧಾನಗಳು ಕೇಳಿಬಂದಿವೆ.

ವಿಧಾನಪರಿಷತ್‌ನಲ್ಲಿ 4 ಸ್ಥಾನಗಳ ಸದಸ್ಯರು ನಿವೃತ್ತರಾಗಿದ್ದು, ಆ ಸ್ಥಾನಕ್ಕೆ ನಾಲ್ಕು ಮಂದಿಯ ಹೆಸರನ್ನು ಅಂತಿಮಗೊಳಿಸಲಾಗಿತ್ತು. ಆದರೆ ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರ ಬೆಂಬಲಿಗರ ನಡುವಿನ ಹಗ್ಗಜಗ್ಗಾಟದಲ್ಲಿ ನೇಮಕಾತಿಯೇ ಪೂರ್ಣಗೊಳ್ಳದೆ ಬಾಕಿ ಉಳಿದಿದೆ.

ಸುಮಾರು ನೂರಕ್ಕೂ ಹೆಚ್ಚು ನಿಗಮಮಂಡಳಿಗಳ ಪೈಕಿ 70ಕ್ಕೆ ಮಾತ್ರ ಅಧ್ಯಕ್ಷ-ಉಪಾಧ್ಯಕ್ಷರ ನೇಮಕಾತಿಯಾಗಿದೆ. ನಿಗಮಗಳಿಗೆ ಅಧ್ಯಕ್ಷರನ್ನು ನೇಮಿಸಲಾಗಿಲ್ಲ. ಈವರೆಗೂ ಯಾವ ನಿಗಮ ಮಂಡಳಿಗಳಿಗೂ ಸದಸ್ಯರನ್ನು ನೇಮಿಸಲು ಸರ್ಕಾರಕ್ಕೆ ಸಾಧ್ಯವಾಗಿಲ್ಲ.

2013 ರಲ್ಲಿ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರು ಇದೇ ರೀತಿಯ ವಿಳಂಬ ಧೋರಣೆ ಮಾಡಿ ಮೂರು ವರ್ಷ ಕಾಲಹರಣ ಮಾಡಿದ್ದರು. ಕೊನೆಯ ಎರಡು ವರ್ಷ ಮಾತ್ರ ಕಾರ್ಯಕರ್ತರಿಗೆ ಅವಕಾಶ ನೀಡಿದ್ದರು. ಅದರ ಪರಿಣಾಮ 2018 ರ ವಿಧಾನಸಭೆಯ ಚುನಾವಣೆಯ ಮೇಲಾಗಿದ್ದು, ಕಾಂಗ್ರೆಸ್ ಸೋತು ಅಧಿಕಾರ ಕಳೆದುಕೊಂಡಿತ್ತು.

2023 ರಲ್ಲಿ ಕಾಂಗ್ರೆಸ್ ಸರ್ಕಾರ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದ್ದರೂ, ಕಾರ್ಯಕರ್ತರನ್ನು ಸದಸ್ಯರನ್ನಾಗಿ ನೇಮಿಸಲು ಸಾಧ್ಯವಾಗಿಲ್ಲ. ಕೆಲವರಿಗಷ್ಟೆ? ಅಧ್ಯಕ್ಷ ಸ್ಥಾನ ಸಿಕ್ಕಿದೆ. ಆದರೆ ಬಹುತೇಕರು ಶಾಸಕರೇ ಇದ್ದಾರೆ. ಚುನಾವಣೆ ವೇಳೆ ಕಷ್ಟಪಟ್ಟು ದುಡಿದ ಕಾರ್ಯಕರ್ತರು ಅವಕಾಶ ವಂಚಿತರಾಗಿ ಮನೆಯಲ್ಲೆ? ಕುಳಿತುಕೊಳ್ಳುವಂತಾಗಿದೆ.

ಡಿ.ಕೆ.ಶಿವಕುಮಾರ್ ಕಾರ್ಯಕರ್ತ ರಿಗೆ ಅಧಿಕಾರ ಕೊಡಿಸಬೇಕು ಎಂದು ಪದೇಪದೇ ಒತ್ತಾಯಿಸುತ್ತಿದ್ದಾರೆ. ಆದರೆ ಅದು ಸಾಧ್ಯವಾಗಿಲ್ಲ. ಶಾಸಕರನ್ನು ಸಮಾ ಧಾನಪಡಿಸಲು ನಿಗಮ-ಮಂಡಳಿಗಳಿಗೆ ಶಾಸಕರನ್ನೆ ನೇಮಿಸುವ ಮೂಲಕ ಸಿದ್ದರಾ ಮಯ್ಯ ಬೇರೆ ರೀತಿಯ ರಣತಂ ತ್ರಗಾರಿಕೆ ರೂಪಿಸಿದ್ದರು. ಅದು ಕಾರ್ಯ ಕರ್ತರಲ್ಲಿ ಅಸಮಾಧಾನವನ್ನು ಹೆಚ್ಚಿಸಿತ್ತು. ಈಗಲೂ ಆ ಅಸಮಾಧಾನ ಹೊಗೆಯಾ ಡುತ್ತಲೇ ಇದೆ.

ಕೆಎಂಎಫ್‌ನ ಅಧ್ಯಕ್ಷ ಸ್ಥಾನದ ವಿಷಯ ದಲ್ಲೂ ಜಟಾಪಟಿ ಶುರುವಾಗಿದೆ. ಡಿ.ಕೆ.ಶಿವ ಕುಮಾರ್ ತಮ ಸಹೋದರ ಮಾಜಿ ಸಂಸದ ಡಿ.ಕೆ.ಸುರೇಶ್ ಅವರನ್ನು ಕೆಎಂಎ ಫ್ ಅಧ್ಯಕ್ಷಸ್ಥಾನದಲ್ಲಿ ಕೂರಿಸುವ ಕಸರತ್ತು ನಡೆಸುತ್ತಿದ್ದಾರೆ. ಅದಕ್ಕೆ ಪ್ರತಿಯಾಗಿ ಮಾಲೂರಿನ ಶಾಸಕ ಕೆ.ವೈ.ನಂಜೇಗೌಡ, ಕೆಎಂಎಫ್‌ನ ಹಾಲಿ ಅಧ್ಯಕ್ಷ ಭೀಮಾ ನಾ ಯಕ್ ಮತ್ತಿತರರು ಪ್ರಬಲ ಪೈಪೋಟಿ ನೀಡುತ್ತಿದ್ದಾರೆ. ಈ ವಿಚಾರವಾಗಿ ಸಿದ್ದರಾ ಮಯ್ಯ ಮತ್ತೊಮ ಇಕ್ಕಟ್ಟಿಗೆ ಸಿಲುಕಿದ್ದಾರೆ.

ಇತ್ತ ಪಕ್ಷ ಸಂಘಟನೆಯಲ್ಲಿ ಯಾರ ಹಸ್ತಕ್ಷೆ ಪಕ್ಕೂ ಅವಕಾಶ ಕೊಡದೆ ಡಿ.ಕೆ.ಶಿವಕು ಮಾರ್ ತಮಗೆ ಬೇಕಾದ 'ವರನ್ನು ಜಿಲ್ಲಾಧ್ಯ ಕ್ಷರನ್ನಾಗಿ ಮಾಡಿಕೊ ಳ್ಳುವ ತಯಾರಿ ನಡೆಸಿದ್ದಾರೆ. ಅದಕ್ಕಾಗಿ ಈಗಾಗಲೇ ವೀಕ್ಷಕರ ತಂಡವನ್ನು ಜಿಲ್ಲಾ ಕೇಂದ್ರ ಗಳಿಗೆ ರವಾನಿಸಲಾಗಿದೆ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ : ಗಜಾನನ ಮಂಗಸೂಳಿ



**ಅಥಣಿ, ಜು.11–**ರೋಟರಿ ಸಂಸ್ಥೆಯು ಕಳೆದ 27 ವರ್ಷಗಳಿಂದ ವಿವಿಧ ಸಾಮಾಜಿಕ ಸೇವೆಗಳನ್ನು ಸಲ್ಲಿಸುತ್ತಾ ಬಂದಿದೆ. ಪರಿಸರ ಸಂರಕ್ಷಣೆಯ ಹಿತ ದೃಷ್ಟಿಯಿಂದ ಪಟ್ಟಣದ ಹೊರವಲಯದ ಜ್ಯೋತಿಬಾ ದೇವಸ್ಥಾನದ ಆವರಣದಲ್ಲಿ ರೋಟರಿ ಉದ್ಯಾನವನ ಸ್ಥಾಪನೆ ಮಾಡುವ ಮೂಲಕ ಇಲ್ಲಿ 350ಕ್ಕೂ ಅಧಿಕ ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಅವುಗಳನ್ನ ಸಂರಕ್ಷಣೆ ಮಾಡುವ ಸಂಕಲ್ಪ ಹೊಂದಲಾಗಿದೆ ಎಂದು ರೋಟರಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಗಜಾನನ ಮಂಗಸೂಳಿ ಹೇಳಿದರು.

ಅವರು ಗುರುವಾರ ಪಟ್ಟಣದ ಹೊರವಲಯದ ಅಬ್ಬಿಹಾಳ ರಸ್ತೆಯಲ್ಲಿರುವ ಜ್ಯೋತಿಬಾ ದೇವಸ್ಥಾನದ ಗುಡ್ಡದಲ್ಲಿ ರೋಟರಿ ಉದ್ಯಾನವನ ನಾಮಕರಣ ಹಾಗೂ ವನಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಮುಂದಿನ ಪೀಳಿಗೆಗೆ ಶುದ್ಧವಾದ ಗಾಳಿ ಮತ್ತು ನೀರು ದೊರಕಬೇಕಾದರೆ ಪರಿಸರವನ್ನು ಸಂರಕ್ಷಣೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ನಮ್ಮ ಹುಟ್ಟುಹಬ್ಬ, ವಿವಾಹ ವಾರ್ಷಿಕೋತ್ಸವ, ಇಲ್ಲವೇ ತಂದೆ-ತಾಯಿಯ ಸ್ಮರಣೆಯ ಹೆಸರಿನಲ್ಲಿ ಗಿಡಗಳನ್ನು ನೆಟ್ಟು ಅವುಗಳನ್ನ ಪೊ?ಷಿಸಬೇಕು. ಗಿಡಗಳನ್ನು ನೆಡುವುದು ಕೇವಲ ಫೊ?ಟೋ ಕಾರ್ಯಕ್ರಮಕ್ಕೆ ಸೀಮಿತವಾಗದೇ ಅವುಗಳ ಬೆಳವಣಿಗೆಗೂ ಶ್ರಮಿಸಬೇಕು ಎಂದು ರೋಟರಿ ಸದಸ್ಯರಿಗೆ ಸಲಹೆ ನೀಡಿದ ಅವರು ಶ್ರೀ ಜ್ಯೋತಿಬಾ ದೇವಸ್ಥಾನದ ಆವರಣದಲ್ಲಿ ಪ್ರಶಾಂತವಾದ ವಾತಾವರಣ ಮತ್ತು ಶುದ್ಧವಾದ ಆಮ್ಲಜನಕ ದೊರಕುವ ಪವಿತ್ರ ಸ್ಥಾನವಾಗಿದೆ. ಇಲ್ಲಿ ಇನ್ನೂ ಭಕ್ತರ ಸಂಖ್ಯೆ ಹೆಚ್ಚಾಗುವ ನಿಟ್ಟಿನಲ್ಲಿ ದೇವಸ್ಥಾನದ ಜೀರ್ಣೋದ್ಧಾರ, ಮಕ್ಕಳ ಆಟಿಕೆ ಸಾಮಗ್ರಿಗಳನ್ನ ಅಳವಡಿಸುವುದು ಅಗತ್ಯವಾಗಿದೆ. ಈಗಾಗಲೇ ದೇವಸ್ಥಾನ ಕಮಿಟಿಯವರ ಅಪೇಕ್ಷೆಯಂತೆ ತಂತಿ ಬೇಲಿಯನ್ನು ರೋಟರಿ ಸಂಸ್ಥೆಯಿಂದ ನಿರ್ಮಿಸಲಾಗಿದ್ದು, ಮುಂಬರುವ ದಿನಗಳಲ್ಲಿ 3 ಲಕ್ಷ ರೂಪಾಯಿ ವೆಚ್ಚದಲ್ಲಿ ಆಟಿಕೆ ಸಾಮಗ್ರಿಗಳನ್ನು ಅಳವಡಿಸಲಾಗುವುದು. ದೇವಸ್ಥಾನದ ಅಭಿವೃದ್ಧಿ ವಿಚಾರದಲ್ಲಿ ಎಲ್ಲರೂ ಪಕ್ಷಾತೀತ ಮತ್ತು ಜಾತ್ಯಾತೀತವಾಗಿ ಶ್ರಮಿಸೋಣ ಎಂದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಶೆಟ್ಟರ ಮಠದ ಮರುಳುಸಿದ್ದ ಸ್ವಾಮೀಜಿ ಮಾತನಾಡಿ ಕೊರೋನಾ ಸಂದರ್ಭದಲ್ಲಿ ಆಕ್ಸಿಜನ್ ಕೊರತೆಯಿಂದ ಅನೇಕ ಜನರು ಪ್ರಾಣವನ್ನು ಕಳೆದುಕೊಂಡ ಸಂದರ್ಭವನ್ನು ನಾವೆಲ್ಲರೂ ನೋಡಿದ್ದೇವೆ. ಮುಂದಿನ ಜನಾಂಗಕ್ಕೆ ಶುದ್ಧವಾದ ಗಾಳಿ ನೀರು ಆಹಾರ ದೊರಕಬೇಕಾದರೆ ಪ್ರತಿಯೊಬ್ಬರೂ ಗಿಡಮರಗಳನ್ನು ನೆಟ್ಟು ಅವುಗಳನ್ನು ಬೆಳೆಸಬೇಕೆಂದು ಕರೆ ನೀಡಿದರು.

ಶಿಕ್ಷಣ ಪ್ರೇಮಿ, ಮುಖಂಡರ ಶಿವಾನಂದ ದಿವಾನಮಳ ಪ್ರಾಸ್ತಾವಿಕವಾಗಿ ಮಾತನಾಡಿ ದೇವಸ್ಥಾನದ ಆವರಣದಲ್ಲಿ ರೋಟರಿ ಸಂಸ್ಥೆ ಹಾಗೂ ಸಾಮಾಜಿಕ ಅರಣ್ಯ ವಲಯದ ಅಧಿಕಾರಿಗಳ ಮೂಲಕ ವಿವಿಧ ಗಿಡದ ಮರಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಿರುವುದು ಮಹತ್ವದ ಕಾಯಕವಾಗಿದೆ. ರೋಟರಿ ಸಂಸ್ಥೆಗೆ ಹಾಗೂ ಸಾಮಾಜಿಕ ಅರಣ್ಯ ವಲಯದ ಅಧಿಕಾರಿಗಳಿಗೆ ದೇವಸ್ಥಾನ ಅಭಿವೃದ್ಧಿ ಸಮಿತಿ ಸದಸ್ಯರಿಗೆ ಅಭಿನಂ ದಿಸಿದರು.

ಈ ಸಂದರ್ಭದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ಸಚಿನ ದೇಸಾಯಿ, ಇನ್ನ ರ್ ವ್ಹಿಲ್ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಪೂರ್ಣಿಮಾ ಪಾಂಗಿ, ಇನ್ನರ್ ವ್ಹಿಲ್ ಸಂಸ್ಥೆಯ ಅಧ್ಯಕ್ಷ ಸುನೀತಾ ದೇಸಾಯಿ, ಸಾಮಾಜಿಕ ಅರಣ್ಯ ವಲಯ ಅಧಿಕಾರಿ ಪ್ರಶಾಂತ್ ಗೌರಾಣಿ, ಉಪ ವಲಯ ಅರಣ್ಯ ಅಧಿಕಾರಿ ಎಸ್ ಎಂ, ಮುಂಜಿ, ಎ ಬಿ ಕುಂಬಾರ, ದೇವಸ್ಥಾನ ಕಮಿಟಿಯ ಅಧ್ಯಕ್ಷ ಬಸವರಾಜ ಮಾಧಗುಡಿ, ಸುನಿಲ್ ದೇಸಾ ಯಿ, ಗುರುಲಿಂಗ ಬಾಷಿಂಗಿ, ಬಾಬು ಚಮ ಕೇರಿ, ಗಿರೀಶ್ ದಿವಾನಮಳ, ಕುಮಾರ ಗೋಟ್ಟಿ, ಸಂದೀಪ ಪಾಟೀಲ, ರೋಟರಿ ಸಂಸ್ಥೆಯ ಸದಸ್ಯರಾದ ಮೇಘರಾಜ ಪರಮಾರ, ಅರುಣ ಸೌದಾಗರ, ಶೇಖರ ಕೋಲಾರ, ಅರುಣ ಯಲಗುದ್ರಿ, ಶ್ರೀಕಾಂ ತ ಅಥಣಿ, ಡಾ. ಪಿ ಪಿ ಮಿರಜ, ಡಾ.ಆ ನಂದ ಗುಂಜಿಗಾವಿ, ರಮೇಶ ಬುಲಬುಲೆ, ಆನಂದ ಟೋಣಪಿ, ಸುರೇಶ್ ಬಳ್ಳೊಳ್ಳಿ, ಬಾಹುಬಲಿ ಯಂಡೋಳಿ, ಬಾಹುಬಲಿ ಅಸ್ಕಿ, ಸುನಿಲ್ ದೇಸಾಯಿ, ಅವಿನಾಶ ಜಾದವ, ಡಾ. ಆನಂದ್ ಕುಲಕರ್ಣಿ, ಡಾ. ಸಚಿನ್ ಮಿರಜ, ಬಾಳಪ್ಪಣ್ಣ ಬುಕಿಟಗಾರ, ತೃಪ್ತಿ ಕುಲಕರ್ಣಿ, ಸುಮೇತ ಮಿರಜ, ವೈಶಾಲಿ ಮಠಪತಿ, ಅರಣ್ಯ ಇಲಾಖೆಯ ಇನ್ನಿತರರು ಉಪಸ್ಥಿತರಿದ್ದರು.

# ಗೋವುಗಳ ಮೇಲಿನ ನಿರಂತರ ದಾಳಿ ಜಿಹಾದಿ ಶಕ್ತಿಗಳ ಷಡ್ಯಂತ್ರ : ಆರ್.ಅಶೋಕ್



**ಬೆಂಗಳೂರು,ಜು.11–** ಗೋವುಗಳ ಮೇಲೆ ಪದೇ ಪದೇ ನಡೆಯುತ್ತಿರುವ ದಾಳಿಗಳನ್ನು ಗಮನಿಸಿದರೆ ಇದರ ಹಿಂದೆ ದೊಡ್ಡ ಜಾಲವೇ ಅಡಗಿದಂತಿದೆ. ಮತಾಂಧ ಶಕ್ತಿಗಳು, ಮೂಲಭೂತವಾದಿ ಶಕ್ತಿಗಳ ದೊಡ್ಡ ಜಿಹಾದಿ ಷಡ್ಯಂತ್ರವೇ ಇದ್ದಂತಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಟ್ವಿಟ್ ಮಾಡಿರುವ ಅವರು, ಸರ್ಕಾರ ಇದನ್ನ ಅತ್ಯಂತ ಗಂಭೀರವಾಗಿ ಪರಿಗಣಿಸಿ ಈ ದುಷ್ಕೃತ್ಯಗಳಿಗೆ ಕಡಿವಾಣ ಹಾಕದೆ ಹೋದರೆ, ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಚ್ಚರಿಕೆ ಎಂದು ಹೇಳಿದ್ದಾರೆ.

ಗೋಹಂತಕ ಕಾಂಗ್ರೆಸ್ ಸರ್ಕಾರಕ್ಕೆ ಗೋಹತ್ಯಾ ಶಾಪ ತಟ್ಟದೇ ಇರದು! ಬೆಂಗಳೂರಿನ ಚಾಮರಾಜಪೇಟೆ, ರಾಮನಗರ, ಹೊನ್ನಾವರ ತಾಲ್ಲೂಕಿನ ಸಾಲ್ಕೊಡ ಗ್ರಾಮ, ಶಿವಮೊಗ್ಗ ಜಿಲ್ಲೆಯ ಹೊಸನಗರ ಚಿಕ್ಕಮಗಳೂರಿನಲ್ಲಿ ಘಟನೆ ನಡೆದಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ. ಸಿದ್ದರಾಮಯ್ಯನವರ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಗೋಮಾತೆಯ ಕೆಚ್ಚಲು ಕತ್ತರಿಸುವ ಅಮಾನುಷ ಕೃತ್ಯ ರಾಜ್ಯದಲ್ಲಿ ಪದೇ ಪದೇ ಮರುಕಳಿಸುತ್ತಲೇ ಇದ್ದು, ಚಿಕ್ಕಮಗಳೂರಿನಲ್ಲಿ ಗೋವಿನ ಮೇಲೆ ವಿಕೃತಿ ಮೆರೆಯುವ ಮೂಲಕ ಕಿಡಿಗೇಡಿಗಳು ಮತ್ತೊಮ್ಮೆ ಕ್ರೌರ್ಯ ಪ್ರದರ್ಶನ ಮಾಡಿದ್ದಾರೆ. ತುಷ್ಟಿಕರಣ, ಅರಾಜಕತೆಯಿಂದ ನಿಸ್ತೇಜವಾಗಿರುವ ಸಿಎಂ ಸಿದ್ದರಾಮಯ್ಯನವರ ಸರ್ಕಾರದ ಬಲಹೀನತೆಯನ್ನೆ ಬಂಡವಾಳವಾಗಿಸಿಕೊಂಡಿರುವ ಮತಾಂಧ ಶಕ್ತಿಗಳು, ಗೋವುಗಳ ಮೇಲೆ ಪ್ರಹಾರ ಮಾಡುವ ಮೂಲಕ ಹಿಂದೂಗಳಿಗೆ ಸವಾಲು ಹಾಕುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ನಾಯಕನ ಹತ್ಯೆ



**ಕೋಲ್ಕತ್ತಾ, ಜು.11–** ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯಲ್ಲಿ 38 ವರ್ಷದ ತೃಣಮೂಲ ಕಾಂಗ್ರೆಸ್ ನಾಯಕನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ.ತಡರಾತ್ರಿ ಭಂಗಾರ್ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಟಿಎಂಸಿಯ ಕ್ಯಾನಿಂಗ್ ಪುರ್ಬಾ ಶಾಸಕ ಸೌಕತ್ ಮೊಲ್ಲಾ ಅವರ ಆಪ್ತ ಸಹಾಯಕ ರಜ್ಜಕ್ ಖಾನ್ ಅವರ ಮೇಲೆ ಕೆಲವು ಬಂದೂಕುಧಾರಿಗಳು ಗುಂಡು ಹಾರಿಸಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಟಿಎಂಸಿ ಕಾರ್ಯಕಾರಿಣಿಯ ಹತ್ಯೆಗೆ ಸಂಬಂಧಿಸಿದಂತೆ ಇದುವರೆಗೆ ಯಾರನ್ನೂ ಬಂಧಿಸಲಾಗಿಲ್ಲ ಎಂದು ಅವರು ಹೇಳಿದರು.ಟಿಎಂಸಿಯ ಚಲ್ತಾಬೇರಿಯಾ ಘಟಕದ ಅಧ್ಯಕ್ಷ ಖಾನ್ ಅವರು ಅಲ್ಲಿ ನಡೆದ ಪಕ್ಷದ ಸಭೆಯಲ್ಲಿ ಭಾಗವಹಿಸಿ ಮನೆಗೆ ಹಿಂತಿರುಗುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಅಧಿಕಾರಿ ಹೇಳಿದರು.

## ಯುವನಿಧಿ ವಿಶೇಷ ನೋಂದಣಿ ಅಭಿಯಾನದಡಿ ನಿರುದ್ಯೋಗ ಭತ್ಯೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.11–**ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ 2023–24 ಮತ್ತು 2024–25ನೆ ಸಾಲಿನಲ್ಲಿ ಸ್ನಾತ್ತಕ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮ ಪದವಿಯಲ್ಲಿ ತೇರ್ಗಡೆಯಾಗಿ ಉದ್ಯೋಗ ಸಿಗದ ಅಭ್ಯರ್ಥಿಗಳಿಂದ ನಿರುದ್ಯೋಗ ಭತ್ಯೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸೇವಾಸಿಂಧು ವೆಬ್‌ಪೋರ್ಟ್‌ಲ್ ವಿಳಾಸ: https://sevasindhugs.karnataka.gov.in ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದಿನಾಂಕ: 07–07–2025 ರಿಂದ 07–08–2025 ರವರೆಗೆ ವಿಶೇಷ ನೋಂದಾಣಿ ಅಭಿಯಾನವನ್ನು ರಾಯಚೂರಿನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೊಗಿಸಿಕೊಂಡು ಇದರ ಪ್ರಯೋಜನೆಯನ್ನು ಪಡೆದುಕೊಳ್ಳಬಹುದಾಗಿದೆ.

ಅಭ್ಯರ್ಥಿಗಳು ಕರ್ನಾಟಕ ಒನ್/ ಗ್ರಾಮ ಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ್ ಸಿಡೆಡ್, ಬ್ಯಾಂಕ್ ಖಾತೆ, ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ನಂಬರ್ ಹೊಂದಿರತಕ್ಕದ್ದು, ಅರ್ಜಿ ಸಲ್ಲಿಸಿದ ನಂತರ ಸೇವಾಸಿಂದು ಪೋರ್ಟ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿ ಇದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಅಗಾದ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಪ್ರೂವ್ ಮಾಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 1800–599–7154 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532–231684ಗೆ ಸಂಪರ್ಕಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ವಾರಸುದಾರರ ಪತ್ತೆಗೆ ರೈಲ್ವೇ ಪೊಲೀಸರಿಂದ ಮನವಿ

**ರಾಯಚೂರು,ಜು.11–**ಹನುಮಾಪುರ ಮತ್ತು ಮಂತ್ರಾಲಯ ರೈಲು ನಿಲ್ದಾಣಗಳ ಮದ್ಯೆ ಕೀ,ಮೀ ನಂ 538/15–13 ಆಪ್‌ಲೈನ್ ರೈಲು ಹಳಿಯಲ್ಲಿ ಜೂ.26ರಂದು ಸುಮಾರು 50 ವರ್ಷದ ಒಬ್ಬರು ಅಪರಿಚಿತ ಗಂಡಸು 12163 ರೈಲು ಗಾಡಿಗೆ ಅಡ್ಡ ನಿಂತು ಆತ್ಮಹತ್ಯೆ ಮಾಡಿಕೊಂಡು ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಯುಡಿಆರ್ ನಂ.41/2025 ಕಲಂ; 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರ ಪತ್ತೆಗೆ ಕೋರಲಾಗಿದೆ.

ಮೃತನ ಚಹರೆ ಪಟ್ಟಿ; ವಯಸ್ಸು ಸುಮಾರು 50 ವರ್ಷ, ಎತ್ತರ ಸುಮಾರು 5.2 ಅಡಿ, ಸಾದಾಗೆಂಪು ಮೈಬಣ್ಣ ತಲೆಯಭಾಗವು ಮುಂಡದ ಭಾಗದಿಂದ ಕಟ್ಟಾಗಿ ಒಡೆದು ಮೆದುಳು ಮಾಂಸ ಹೊರಬಂದು ಚೂರುಚೂರು ಆಗಿರುವುದರಿಂದ ಸಂಪೂರ್ಣ ಚಹರೆ ಪಟ್ಟಿ ಗುರುತಿಸಲು ಅಸಾಧ್ಯವಾಗಿದೆ, ಒಂದು ಕೆಂಪು ಬಣ್ಣದ ಬಣ್ಣದ ರೆಡಿಮೇಡ್ ಪ್ಯಾಂಟ್, ಒಂದು ಹಳದಿ ಮತ್ತು ಬಿಳಿ ಸಣ್ಣ ಚುಕ್ಕಿಯುಳ್ಳ ರೆಡಿಮೇಡ್ ಶರ್ಟ ಬಟ್ಟೆಯನ್ನು ಧರಿಸಿದ್ದು, ಇದರ ಹೊರೆತು ಬೇರೇನು ಇರುವುದಿಲ್ಲ.

ಈ ಮೃತ ಅಪರಿಚಿತ ಮೃತನ ವಾರಸುದಾರರು ಪತ್ತೆಯಾದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532– 231716 ಅಥವಾ ಮೊ.ನಂ:9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿಶಾಲೆಯಲ್ಲಿ ವಿದ್ಯಾರ್ಥಿ ಸಾವು:ಪಾಲಕರ ಪ್ರತಿಭಟನೆ



**ಕಲಬುರಗಿ,ಜು.11–** ಸೇಡಂ ತಾಲೂಕಿನ ಮುಧೋಳ ವಸತಿಶಾಲೆಯಲ್ಲಿ ಪಾಣೆಗಾಂವ ಗ್ರಾಮದ 7 ನೆಯ ತರಗತಿಯ ನಾರಾಯಣ ಎಂಬ ವಿದ್ಯಾರ್ಥಿಯ ಸಾವು ಆತ್ಮಹತ್ಯೆಯಲ್ಲ ಅದು ಕೊಲೆ ಎಂದು ಆರೋಪಿಸಿ ಇಂದು ಮೃತ ವಿದ್ಯಾರ್ಥಿಯ ಪಾಲಕರು ಮತ್ತು ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮುಖಂಡ ಪವನಕುಮಾರ ವಳಕೇರಿ ಅವರು ಪ್ರತಿಭಟನೆಯ ನೇತೃತ್ವವಹಿಸಿದ್ದರು. ಇದು ಆತ್ಮಹತ್ಯೆಯಲ್ಲ ಕೊಲೆ. ವಸತಿ ಶಾಲೆಯವರೇ ಕೊಲೆ ಮಾಡಿ ಫ್ಯಾನಿಗೆ ನೇತು ಹಾಕಿ ಆತ್ಮಹತ್ಯೆಯ ಕತೆ ಕಟ್ಟಿದ್ದಾರೆ ಎಂದು ಆರೋಪಿಸಿದರು.

ಮೃತ ಬಾಲಕನ ಕುಟುಂಬಕ್ಕೆ 5 ಲಕ್ಷ ರೂ ಪರಿಹಾರ ನೀಡಿದ್ದು ಅದನ್ನು ಪಾಲಕರು ನಿರಾಕರಿಸಿ, 25 ಲಕ್ಷ ರೂ ಪರಿಹಾರ ನೀಡಬೇಕು. ಹಾಗೂ ಮೃತ ವಿದ್ಯಾರ್ಥಿಯ ತಾಯಿಗೆ ಸರಕಾರಿ ನೌಕರಿ ನೀಡಬೇಕು ಎಂದು ಆಗ್ರಹಿಸಿದರು.ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ಮನವಿಯನ್ನು ಸಲ್ಲಿಸಲಾಯಿತು

## ಜಿಲ್ಲೆಯಲ್ಲಿ ಕಾರ್ಯನಿವಹಿಸಿದ್ದು ಉತ್ತಮ ಅನುಭವವಾಗಿದೆ:ನಿಗರ್ಮಿತ ಸಿಇಓ ಪಾಂಡ್ವೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.11–:** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿ ಈಗ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾಗಿ ವರ್ಗಾವಣೆಯಾದ ರಾಹುಲ್ ತುಕಾರಾಂ ಪಾಂಡ್ವೆ ಅವರಿಗೆ ಬೀಳ್ಕೊಡುಗೆ ಹಾಗೂ ರಾಯಚೂರು ಜಿ.ಪಂಗೆ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ನಿಯುಕ್ತಿಗೊಂಡ ಈಶ್ವರ ಕುಮಾರ ಕಾಂದೂ ಅವರಿಗೆ ಸ್ವಾಗತ ಕಾರ್ಯಕ್ರಮವನ್ನು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು.

ಈ ವೇಳೆ ನಿರ್ಗಮಿತ ಸಿಇಓ ರಾಹುಲ್ ತುಕಾರಾಂ ಪಾಂಡ್ವೆ ಅವರು ಮಾತನಾಡಿ, ನಾನು ಸುಮಾರು 23 ತಿಂಗಳುಗಳ ಕಾಲ ಈ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿದ ನನಗೆ ಉತ್ತಮ ಅನುಭವ ಮತ್ತು ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಒಳ್ಳೆಯ ಕೆಲಸ ಮಾಡುತ್ತಾರೆ. ಆದರೆ ಅದರ ಸಂಪೂರ್ಣ ಮಾಹಿತಿ ನೀಡುವಲ್ಲಿ ವಿಫಲರಾಗುತ್ತಿದ್ದಾರೆ. ಅದು ಸ್ವಲ್ಪ ಅಭಿವೃದ್ಧಿ ಪಡಿಸಿಕೊಳ್ಳಬೇಕು ಎಂದರು. ಎಲ್ಲಾ ಇಲಾಖೆಯ ಅಧಿಕಾರಿಗಳು ಹೆಚ್ಚೆತ್ತುಕೊಂಡು ಕೆಲಸ ಮಾಡಿದರೆ ಜಿಲ್ಲೆಯ ಅಭಿವೃದ್ಧಿ ಸಾಧ್ಯವೆಂದು ಹೇಳಿದರು.

ಕೃಷಿ ಇಲಾಖೆ ಮತ್ತು ವಿವಿಧ ಇಲಾಖೆಗಳು ಸಹ ಒಳ್ಳೆಯ ಕೆಲಸವನ್ನು ಮಾಡುತ್ತಿದೆ ಮತ್ತು ಎಲ್ಲಾ ಇಲಾಖೆಯ



ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು. ರಾಯಚೂರು ಜಿಲ್ಲೆಯು ತುಂಬಾ ಒಳ್ಳೆಯ ಜಿಲ್ಲೆ ಹಾಗೂ ಜಿಲ್ಲೆಯ ಪೋಲಿಸ್ ವರಿಷ್ಠಾಧಿಕಾರಿಗಳೊಂದಿಗೆ ಒಡನಾಟವನ್ನು ಹಂಚಿಕೊಂಡರು.

ಈ ವೇಳೆ ನೂತನ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ರಾಯಚೂರಿನ ಜಿ.ಪಂನ ಸಿಇಓಗಳ ಸೇವೆಯನ್ನು ನೋಡಿದಾಗ 2 ವರ್ಷ ಸೇವೆಯನ್ನು ಪೂರ್ತಿಮಾಡಿದ ಹೆಗ್ಗಳಿಕೆ ರಾಹುಲ್ ತುಕಾರಾಂ ಅವರಿಗೆ ಸಲ್ಲುತ್ತದೆ. ಅವರು ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳ ಕಾರ್ಯಕ್ಷಮತೆಯಲ್ಲಿ ತುಂಬಾ ಸಹಕಾರ ನೀಡಿರುವುದು ತಿಳಿಯುತ್ತಿದೆ.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ಜಿಲ್ಲಾ ಕೇಂದ್ರದ ನಿರ್ವಹಣೆಯಲ್ಲಿ ಡಿಸಿ, ಎಸ್ಪಿ, ಹಾಗೂ ಸಿಇಓ ಈ ಮೂರು ಹುದ್ದೆಗಳು ಅತ್ಯಂತ ಮುಖ್ಯವಾದವು ಪಾಂಡ್ವೆ ಅವರು ಈ ಮೂರು ಪೈಕಿ ಒಂದಾದ ಮುಖ್ಯ ಕಾರ್ಯ ನಿರ್ವಾಹಕರ ಹುದ್ದೆಯನ್ನು ಅತ್ಯಂತ ಸಮರ್ಪಕವಾಗಿ ನಿಭಾಯಿಸಿದರು. ಯಾವುದೇ ಸರ್ಕಾರಿ ಕಾರ್ಯಕ್ರಮದಲ್ಲಿ ಅವರೊಂದಿಗೆ ವೇದಿಕೆ ಹಂಚಿಕೊಳ್ಳುವುದು ನನಗೆ ಗೌರವವಾಗಿತ್ತು.

ಸಿಬ್ಬಂದಿಗಳ ಮೇಲಿನ ಕ್ರಮಕೈಗೊಳ್ಳುವ ಸಂದರ್ಭದಲ್ಲಿ ಅವರು ನೀಡುತ್ತಿದ್ದ ಸೂಕ್ಷ್ಮ ಸಲಹೆಗಳು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕೆಲಸ ಮಾಡಲು ಹಾದಿಯಾಗಿದ್ದವು ಎಂದು ತಿಳಿಸಿದರು. ಅವರ ನಿರ್ವಹಣಾ ಶೈಲಿ ಶಿಸ್ತಿನ ಜೊತೆ ಮನುಷ್ಯತ್ವವನ್ನೂ ಒಳಗೊಂಡಿತ್ತು. ಅವರು ಅಧಿಕಾರಿಯಾಗಿದ್ದಷ್ಟೇ ಅಲ್ಲದೇ ತಮ್ಮ ಸರಳತೆಯಿಂದ ಜಿಲ್ಲೆಯಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಜಿಲ್ಲೆಯಲ್ಲಿ ಯಾವುದೇ ಸಮಸ್ಯೆ ಬಂದರೂ ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ತಮ್ಮದೇ ಜ್ಞಾನದಿಂದ ಸಲಹೆಗಳನ್ನು ನೀಡುತ್ತಿದ್ದರು. ಅವರ ಮುಂದಿನ ಹುದ್ದೆಯಲ್ಲಿ ಅವರು ಇನ್ನೂ ಹೆಚ್ಚಿನ ಜನರಿಗೆ ಉತ್ತಮ ಸೇವೆ ನೀಡಲಿ ಎಂದರು.

ಈ ವೇಳೆ ಸಹಾಯಕ ಆಯುಕ್ತ ಗಜಾನನ ಬಾಲೆ ಅವರು ಮಾತನಾಡಿ, ಪಾಂಡ್ವೆ ಅವರು ಜೆಸ್ಕಾಂ ಎಂಡಿಯಾಗಿ ಕಲಬುರ್ಗಿಯಲ್ಲಿ ಸೇವೆ ಸಲ್ಲಿಸಿದ ಸಂದರ್ಭದಲ್ಲಿ ಅವರೊಂದಿಗೆ ನಾನು ಕೆಲಸ ಮಾಡಿದ್ದೇನೆ. ಅವರು ಈಗ ಶಿಕ್ಷಣ ಇಲಾಖೆಯ ಆಯುಕ್ತರಾಗಿರುವುದು ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಲಿದ್ದಾರೆ. ಅವರ ಕಾರ್ಯನಿಷ್ಠೆ ಹಾಗೂ ಸ್ಪಷ್ಟತೆ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಯೋಜನಾ ನಿರ್ದೇಶಕ ಶರಣಬಸವರಾಜ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ಗ್ಯಾರಂಟಿ ಯೋಜನೆ ಮಹಿಳೆಯರ ಬದುಕಿಗೆ ಸಹಕಾರಿ : ವೆಂಕಟೇಶ ಗುತ್ತೆದಾರ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.11–** ಸರಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳು ಗ್ರಾಮೀಣ ಪ್ರದೇಶದ ಮಹಿಳೆಯರ ಸಾವಲಂಬಿ ಬದುಕಿಗೆ ಸಹಕಾರಿಯಾಗಿವೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅದ್ಯಕ್ಷ ವೆಂಕಟೇಶ ಗುತ್ತೇದಾರ ಹೇಳಿದರು.



ತಾಲೂಕಿನ ಆನೆಹೊಸೂರು ಗ್ರಾಮದಲ್ಲಿ ಶುಕ್ರವಾರ ಪಂಚಾಯತ್ ಮಟ್ಟದ ಗ್ಯಾರಂಟಿ ಯೋಜನಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಯೋಜನೆಗಳು ಆರಂಭವಾದಾಗಿನಿಂದ ತಾಲೂಕಿನಲ್ಲಿ 63.354 ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಲಾಭಪಡೆದುಕೊಳ್ಳುತ್ತಿದ್ದಾರೆ. ಯುವನಿಧಿ ಯೋಜನೆಯಡಿ 2985 ವಿದ್ಯಾರ್ಥಿಗಳು ನೋಂದಣೆ ಮಾಡಿಸಿಕೊಂಡು ಮಾಸಿಕ ಹಣ ಪಡೆಯುತ್ತಿದ್ದಾರೆ. ಅನ್ನಭಾಗ್ಯ ಯೋಜನೆಯಡಿ 82,086 ಬಿಪಿಎಲ್, 9042 ಅಂತ್ಯೋದಯ ಸೇರಿ ಒಟ್ಟು 3,03,357 ಫಲಾನುಭವಿಗಳು ಲಾಭ ಪಡೆದುಕೊಳ್ಳುತ್ತಿದ್ದಾರೆ. 38.451 ಫಲಾನುಭವಿಗಳು ಗೃಹಜ್ಯೋತಿ ಯೋಜನೆಯ ಲಾಭ ಪಡೆದುಕೊಳ್ಳುತ್ತಿದ್ದಾರೆ. ಇನ್ನೂ ಕೆಲವರು ತಾಂತ್ರಿಕ ದೋಷದಿಂದ ಯೋಜನೆಯ ಲಾಭ ಪಡೆದುಕೊಳ್ಳುತ್ತಿಲ್ಲ. ತ್ವರಿತವಾಗಿ ಅರ್ಹರೆಲ್ಲರೂ ಗ್ಯಾರಂಟಿ ಯೋಜನೆಗಳ ಲಾಭಪಡೆದುಕೊಳ್ಳುವಂತೆ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆನೆಹೊಸೂರು ಗ್ರಾಮ ಪಂಚಾಯತ್ ಅದ್ಯಕ್ಷೆ ಅಮೀನಾಬೇಗಂ ಮೋದಿನಸಾಬ. ಪಿಡಿಓ ಗದ್ದೆಪ, ಅನುಷ್ಠಾನ ಸಮಿತಿ ಸದಸ್ಯರಾದ ನಾಮತುಲ್ಲಾ ಖಾದಿ. ಮಲ್ಲನಗೌಡ ಭೂಪೂರ. ಕೆಡಿಪಿ ಸದಸ್ಯರಾದ ಶರಣಪ್ಪ ಕಟಗಿ, ಗದ್ದೆನಗೌಡ ಪಾಟೀಲ್, ಅಸ್ಲಂಪಾಷಾ,ಗೌಡಪ್ಪ, ಲಕ್ಷ್ಮಿಬಾಯಿ ಶಾಂತಾ ಹಣಗಿ, ಆಹಾರ ಇಲಾಖೆ ಅಧಿಕಾರಿ ಅಬ್ದುಲ್ ರವೂಫ್, ಸಾರಿಗೆ ಇಲಾಖೆ, ಜೆಸ್ಕಾಂ, ಸಿಡಿಪಿಓ ಸೇರಿ ವಿವಿಧ ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಇದ್ದರು.

## ಶ್ರೀಹಡಪದ ಅಪ್ಪಣ್ಣ ಜಯಂತಿ ಆಚರಣೆ

**ಯುವ ಮಾರ್ಗ ಸುದ್ದಿ**

**ಸಿರವಾರ,ಜು.11–** ಪಟ್ಟಣದ ಎಪಿಎಂಸಿ ಕ್ರಾಸ್ ನಲ್ಲಿರುವ ಶ್ರೀನಿಜಸುಖಿ ಶಿವಶರಣ ಹಡಪದ ಅಪ್ಪಣ್ಣನವರ 891ನೇ ಜಯಂತಿ ಪ್ರಯುಕ್ತ ಹಡಪದ ಅಪ್ಪಣ್ಣ ನವರ ನಾಮ ಫಲಕಕ್ಕೆ ಪೂಜೆ ಮಾಡಿ ಮಾಲಾರ್ಪಣೆ ಮಾಡಿ ಪುಷ್ಪಾರ್ಪಣೆ ಮಾಡಲಾಯಿತು.

ಈ ಸಂದರ್ಭಲ್ಲಿ ಪ.ಪಂ ಸದಸ್ಯ ಹಾಜಿ ಚೌದ್ರಿ, ಮಾಜಿ ಉಪಾದ್ಯಕ್ಷ ಚನ್ನಪ್ಪ ಗಡ್ಡ, ಕನ್ನಡ



ಸೇನೆ ಕರ್ನಾಟಕ ತಾಲೂಕ ಅದ್ಯಕ್ಷ ವೇಂಕಟೇಶ ದೊರೆ, ಕಾರ್ಯಾಧ್ಯಕ್ಷರಾದ ಚಂದ್ರಶೇಖರ ಸಿರವಾರ, ಬಸವರಾಜ ಹರವಿ, ಶರಣಪ್ಪ ನಾಗನೂರ, ಬಸವರಾಜ ಹೀರಾ, ಬಸವರಾಜ ಬೂದೂರು, ಭೀಮಣ್ಣ, ಮಲ್ಲಿಕಾರ್ಜುನ, ಅಮರೇಶ, ಮೌನೇಶ, ಆನಂದ ನವಲಕಲ್, ವೀರೇಶ,ಯಾಮುನಪ್ಪ, ರಮೇಶ ಭೋವಿ,ರಾಜ ಬೋವಿ, ಹಾ ಗೂ ಹಡಪದ ಬಂಧುಗಳು,ಉಪಸ್ಥಿದ್ದರು

## ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಎಸ್‌ಸಿ ಮತ್ತು ಎಸ್‌ಟಿ ಫಲಾನುಭವಿಗಳಿಂದ ಅರ್ಜಿ ಆಹ್ವಾನ

**ರಾಯಚೂರು,ಜು.11–** ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕವಾದ ಎ.ಎಚ್.ಪಿ ಯೋಜನೆಯಡಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2,419 ಗುಂಪು ಮನೆಗಳು ಜಿ+3 ಮಾದರಿಯಲ್ಲಿ ನಿರ್ಮಾಣವಾಗುತ್ತಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ವಸತಿ ಮತ್ತು ನಿವೇಶನ ರಹಿತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ವರ್ಗದವರಿಗೆ–1,053 ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ–951 ಒಟ್ಟು 2,004 ಮನೆಗಳ ಗುರಿ ನಿಗದಿಯಾಗಿದ್ದು, ಇದುವರೆಗೂ ಪರಿಶಿಷ್ಟ ಜಾತಿ ವರ್ಗದವರಿಂದ–194 ಹಾಗೂ ಪರಿಶಿಷ್ಟ ಪಂಗಡ ವರ್ಗದವರಿಂದ–37 ಒಟ್ಟು 231 ಅರ್ಜಿಗಳು ಮಾತ್ರ ಕಚೇರಿಗೆ ಸ್ವೀಕೃತವಾಗಿರುತ್ತವೆ. ನಿಗದಿಪಡಿಸಿದ ಗುರಿಗಿಂತಲೂ ಅತಿ ಕಡಿಮೆ ಅರ್ಜಿಗಳು ಸ್ವೀಕೃತವಾಗಿದ್ದರಿಂದ ಬಾಕಿ ಪರಿಶಿಷ್ಟ ಜಾತಿ ವರ್ಗದ–757 ಅರ್ಜಿಗಳು ಹಾಗೂ ಪರಿಶಿಷ್ಟ ಪಂಗಡ ವರ್ಗದ–1,016 ಅರ್ಜಿಗಳು ಒಟ್ಟು 1,773 ವಸತಿ ಮತ್ತು ನಿವೇಶನ ರಹಿತ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದಾಗಿದೆ.

**ದಾಖಲೆಗಳು:** ನಿಗದಿತ ನಮೂನೆ (4ಬಿ), ಆಧಾರ್ ಕಾರ್ಡ್ (ಮನೆಯ ಯಜಮಾನ/ನಿ ಹಾಗೂ ತಂದೆ / ತಾಯಿ ಮತ್ತು ಪಡಿತರ ಚೀಟಿಯಲ್ಲಿ ಇರುವಂತ ಕುಟುಂಬ ಸದಸ್ಯರ ಆಧಾರ್ ಕಾರ್ಡ್ಗಳು.), ಆದಾಯ ಮತ್ತು ಜಾತಿ ಪ್ರಮಾಣ ಪತ್ರ. (ವಾರ್ಷಿಕ ಆದಾಯ ಕನಿಷ್ಠ 1.20 ಲಕ್ಷ), ಪಡಿತರ ಚೀಟಿ, ಬ್ಯಾಂಕ್ ಖಾತೆಯ ವಿವರ, ಪ್ಯಾನ್ ಕಾರ್ಡ್, ವಾಸಸ್ಥಳ ಪ್ರಮಾಣ ಪತ್ರ, ಅರ್ಜಿದಾರರು ಅವರ ಹೆಸರಿನಲ್ಲಿ ಅಥವಾ ಅವರ ಕುಟುಂಬ ಸದಸ್ಯರ ಹೆಸರಿನಲ್ಲಿ ಯಾವುದೇ ಪಕ್ಕಾ ಮನೆ ಹೊಂದಿರುವುದಿಲ್ಲ. ಎಂಬುದರ ಕುರಿತು ರೂ.20/ರ ಛಾಪಾ ಕಾಗದದಲ್ಲಿ ಪ್ರಮಾಣ ಪತ್ರ ನೀಡಬೇಕು.

ಅರ್ಹತೆ: ಕಡ್ಡಾಯವಾಗಿ ಪ.ಜಾತಿ ಮತ್ತು ಪ.ಪಂಗಡ ವರ್ಗದವರಾಗಿರಬೇಕು, ರಾಯಚೂರು ನಗರ ನಿವಾಸಿಗಳಾಗಿರಬೇಕು, ಫಲಾನುಭವಿಯು ವಿವಾಹಿತ ಮಹಿಳೆ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿಯಾಗಿರಬೇಕು. ಇವರನ್ನು ಹೊರತುಪಡಿಸಿ ಪುರುಷರಾಗಿದ್ದಲ್ಲಿ ಮಾಜಿ ಯೋಧರು, ವಿಧುರರು, ಅಂಗವಿಕಲರು, ಹಿರಿಯ ನಾಗರಿಕರು ವಿಚ್ಛೇದಿತರು ಜುಲೈ 31ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಯನ್ನು ಕಚೇರಿಯ ಸಮಯದಲ್ಲಿ ಆಶ್ರಯ ವಿಭಾಗಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 2ನೇ ವಾರದಲ್ಲಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ

**ರಾಯಚೂರು,ಜು.11–** ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸುವ ಎಲ್ಲಾ ವರ್ಗದ ಪುರುಷರು ಗೂ ಮತ್ತು ಮಹಿಳೆಯರುಗಳಿಗೆ 1 ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2025 ಜುಲೈ 2ನೇ ವಾರದಲ್ಲಿ ಹಮ್ಮಿಕೊಳ್ಳಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು, ಇದಕ್ಕಾಗಿ ರಾಯಚೂರು ಜಿಲ್ಲೆಯ ಆಸಕ್ತ ಎಲ್ಲಾ ವರ್ಗದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಕನಿಷ್ಠ 8 ನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ಜುಲೈ 15ರೊಳಗಾಗಿ ಮೊಬೈಲ್ ಸಂಖ್ಯೆ: 9986600631, 8073789886 ಗೆ ಸಂಪರ್ಕಿಸಿ ತಮ್ಮ ಹೆಸರಗಳನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಎಸ್‌ಐ ಚಾಂದ್ ಪಾಷಾ ವಿರುದ್ಧ ಇಲಾಖಾ ತನಿಖೆ

**ಬೆಂಗಳೂರು,ಜು.11–**ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಲಷ್ಕರ್–ಎ–ತೊಯ್ಬಾ ಉಗ್ರ ಟಿ.ನಸೀರ್‌ಗೆ ನೆರವು ನೀಡಿ ರಾಷ್ಟ್ರೀಯ ತನಿಖಾ ದಳ (ಎನ್‌ಐಎ)ದ ಬಂಧನದಲ್ಲಿರುವ ನಗರ ಸಶಸ್ತ್ರ ಪಡೆಯ ಎಎಸ್‌ಐ ಚಾಂದ್ ಪಾಷಾ ವಿರುದ್ಧ ಇಲಾಖಾ ತನಿಖೆಗೆ ಆದೇಶಿಸಲಾಗಿದೆ.

ಸಾಮಾನ್ಯವಾಗಿ ಈ ರೀತಿಯ ಆರೋಪ ಬಂದಾಗ ಅಮಾನತು ಮಾಡುತ್ತೇವೆ. ಪೊಲೀಸ್ ಇಲಾಖೆಯಲ್ಲಿ ಏನು ಕ್ರಮ ಇದೆಯೋ ಅದನ್ನು ಬಂಧಿತನ ವಿರುದ್ಧ ಕೈಗೊಳ್ಳುತ್ತೇವೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

ಆರೋಪಿ ವಿರುದ್ಧ ತನಿಖೆ ಕೂಡ ಆಗುತ್ತದೆ. ಆ ಬಳಿಕ ಕ್ರಮ ಕೈಗೊಳ್ಳುತ್ತೇವೆ. ಈಗಾಗಲೇ ಎನ್‌ಐಎದಿಂದ ತನಿಖೆ ನಡೆಯುತ್ತಿದೆ. ಮುಂದೆ ನಮ್ಮ ಆಂತರಿಕ ತನಿಖೆಯ ವರದಿಯ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ತಿಳಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H